ವಿಜಯಪುರ | ಸಂಪುಟ 02 | ಸಂಚಿಕೆ 116 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ  Editor: Indushekhar Manur

editor.udayarashmi@gmail.com  RNI NO: KARKAN/2023/86203  ಗುರುವಾರ, ಜೂನ್ 27, 2024



"ರಾಹುಲ್ ಗಾಂಧಿ ಅವರು ವಿಪಕ್ಷ ನಾಯಕ ಸ್ಥಾನದ ಜವಾಬ್ದಾರಿಯನ್ನು ವಹಿಸಿಕೊಂಡಿರುವುದು ದೇಶದ ಹಿತದೃಷ್ಟಿಯಿಂದ ಒಳ್ಳೆಯದು. ಅವರು ಲೋಕಸಭಾ ವಿರೋಧ ಪಕ್ಷದ ಸ್ಥಾನವನ್ನು ಸ್ವೀಕ-ರಿಸಬೇಕೆಂದು ನಾನು ಕೂಡ ಸಲಹೆ ನೀಡಿದ್ದೆ."

– ಸಿದ್ದರಾಮಯ್ಯ
ಮುಖ್ಯಮಂತ್ರಿ

**ಲೈಂಗಿಕ ದೌರ್ಜನ್ಯ ಪ್ರಕರಣ । ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾ । ಇನ್ನೂ ಮೂರು ದಿನಗಳ ಕಾಲ ಎಸ್‌ಐಡಿ ಕಸ್ಟಡಿ**

# ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಜಾಮೀನು ಅರ್ಜಿ ವಜಾ!

ಬೆಂಗಳೂರು: ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧಿತರಾಗಿರುವ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ಜಾಮೀನು ಅರ್ಜಿಯನ್ನು ಬೆಂಗಳೂರಿನ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ವಜಾಗೊಳಿಸಿದೆ.

ಹಾಸನ ಜಿಲ್ಲೆ ಹೊಳೆನರಸೀಪುರ ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾಮೀನು ಕೋರಿ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಧೀಶ ಸಂತೋಷ್ ಗಜಾನನ ಭಟ್, ತೀರ್ಪು ಕಾಯ್ದಿರಿಸಿದ್ದರು. ಬುಧವಾರ (ಜೂನ್ 26) ಅರ್ಜಿ ವಜಾಗೊಳಿಸಿ ಆದೇಶಿಸಿದ್ದಾರೆ.

ಹೊಳೆನರಸೀಪುರದಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಪ್ರಜ್ವಲ್ ರೇವಣ್ಣ ಬಂಧಿಸಿರುವ ಎಸ್‌ಐಟಿ ಪೊಲೀಸರು ವಿಚಾರಣೆ ನಡೆಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದರು. ನ್ಯಾಯಾಲಯ ನ್ಯಾಯಾಂಗ ಬಂಧನ



ವಿಧಿಸಿದೆ. ಹಾಗಾಗಿ, ಜಾಮೀನು ಕೋರಿ ಪ್ರಜ್ವಲ್ ಅರ್ಜಿ ಸಲ್ಲಿಸಿದ್ದರು.


ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ 42ನೇ ಎಸಿಎಂಎಂ ನ್ಯಾಯಾಲಯ, ಪ್ರಜ್ವಲ್ ರೇವಣ್ಣ ಅವರನ್ನು ಜೂನ್ 29ರವರೆಗೆ ಎಸ್‌ಐಟಿ ಕಸ್ಟಡಿಗೆ ನೀಡಿದೆ. ಹೀಗಾಗಿ ಪ್ರಜ್ವಲ್ ರೇವಣ್ಣ ಅವರು ಇನ್ನೂ ಮೂರು ದಿನಗಳ ಕಾಲ ಎಸ್‌ಐಡಿ ಕಸ್ಟಡಿಯಲ್ಲಿ ವಿಚಾರಣೆ ಎದುರಿಸಲಿದ್ದಾರೆ.

### ರಾಜ ನುಡಿ

ರಾಮಾಯಣ, ಮಹಾಭಾರತಗಳು ಕಲಿಸುವ ಮಹತ್ವದ ವಿಚಾರವೆಂದರೆ, ನುಡಿಯುವ ಮೊದಲು 'ಮಾತುಗಳು' ಮನುಷ್ಯನ ವಶದಲ್ಲಿರುತ್ತವೆ. ನುಡಿದ ಮೇಲೆ 'ಮನುಷ್ಯ' ಮಾತುಗಳ ವಶದಲ್ಲಿರುತ್ತಾನೆ. ಮಾತನಾಡುವ ಮೊದಲು ಯೋಚಿಸಿ.

–ಡಾ. ರಾಜಶೇಖರ ನಾಗೂರ

### ವಚನ ಚಿಂತನ



*ಅನಂತ ವರುಷದವರ ಹಿರಿಯರೆಂಬೆನೆ ?*
*ಎನ್ನೆನು ಅವರು ಭೂಭಾರಕರಾಗಿ.*
*ಏಳು ವರುಷದ ಹಿರಿಯ ಚೇಲಾಳ;*
*ಹನ್ನೆರಡು ವರುಷದ ಹಿರಿಯಳು ಮಹಾದೇವಿಯಕ್ಕ.*

*ಅಂಡಜ ಪಿಂಡಜ ಮೀನಜರೆಂಬವರೆಲ್ಲಾ*
*ಅಂದಂದಿನ ಬಾಲಕರು.*
*ನಿಮಗೆ ಬುದ್ಧಿಯ ಹೇಳುವಡೆ ಎನಗೆ ಬುದ್ಧಿಯಿಲ್ಲ,*
*ಕೂಡಲಚೆನ್ನಸಂಗಮದೇವಾ.*

ಈ ವಚನದಲ್ಲಿ ಚೆನ್ನಬಸವಣ್ಣನವರು ಜ್ಞಾನ ಮತ್ತು ವಯಸ್ಸಿನಿಂದ ಯಾರು ಹಿರಿಯರು ಎಂಬ ಬಗ್ಗೆ ಚಿಂತನೆಗೈದಿದ್ದಾರೆ.ನೂರಕ್ಕೂ ಹೆಚ್ಚು (ಅನಂತ)ವರ್ಷ ಗಳವರೆಗೆ ಬದುಕಿದವರನ್ನು ಚನ್ನಬಸವಣ್ಣನವರು ಹಿರಿಯರೆಂದು ಒಪ್ಪುವುದಿಲ್ಲ ಕಾರಣವೆನೆಂದರೆ ಅವರು ಆ ಮಹಾಲಿಂಗವನ್ನರಿಯದೆ ಕೇವಲ ಭೂಮಿಗೆ ಭಾರ ವಾಗಿ ಬದುಕುತ್ತಿದ್ದಾರೆ ಎನ್ನುತ್ತಾರೆ.ಅಲ್ಲಮಪ್ರಭುಗಳು ಸಹ ಇದೇ ಭಾವದಲ್ಲಿ "ಧರೆಯ ಮೇಲುಳ್ಳ ಅರುಹಿರಿಯರೆಲ್ಲರೂ ಮರುಳುಗೊಂಡಾಡುತ್ತಿದ್ದಾರೆ ನೋ ಡಾ. ಮಂಜಿನ ಮಡಕೆಯೊಳಗೆ ರಂಜನೆಯ ಭಂಡವ ತುಂಬಿ ಅಂಜ ದೆ ಪಾಕವ ಮಾಡಿಕೊಂಡು ಉಂಡು,ಭಂಡವ ಮಾರುತ್ತಿರ್ಪರು ನೋಡಾ.ಸಂಜೀ ವನಿಯ ಬೇರಕಾಣದೆ ಮರಣಕ್ಕೊಳಗಾದರು ಗುಹೇಶ್ವರನನ-ರಿಯದ ಭವಭಾರಕ ರೆಲ್ಲರು" ಎಂದಿದ್ದಾರೆ.ಬಸವಣ್ಣನವರು ಸಹ "ಓದಿನ ಹಿರಿಯರು, ವೇದದ ಹಿರಿಯರು,ಶಾ ಸ್ತ್ರದ ಹಿರಿಯರು, ಪುರಾಣದ ಹಿರಿಯರು, ವೇಷದ ಹಿರಿಯರು, ಭಾಷೆ ಯ ಹಿರಿ ಯರು,ಇವರೆಲ್ಲರು ತಮ್ಮ ತಮ್ಮನೆ ಮರೆದರಲ್ಲದೆ ನಿಮ್ಮ ಮರೆದುದಿಲ್ಲ. ತಮ್ಮಮ ರೆದು ನಿಮ್ಮಮರೆದಡೆ ಕೂಡಿಕೊಂಡಿಪ್ಪ ನಮ್ಮ ಕೂಡಲ ಸಂಗಮ ದೇವ ರು."ಎಂದಿರುವರು.ಇನ್ನು ಜ್ಞಾನಾಧಾರಿತ ಹಿರಿಯರನ್ನು ಗುರುತಿಸುವಲ್ಲಿ ಅಂದಿನ ಕಲ್ಯಾಣ ದ ಶರಣರಲ್ಲಿ ಅತ್ಯಂತ ಜ್ಞಾನಿಗಳೆಂದು ಹೆಸರುವಾಸಿಗಳಾಗಿರುವಂತಹ ಚೇಲಾಳ ಶರಣರಿಗೆ 7ವರ್ಷ ಅಕ್ಕಮಹಾದೇವಿಯವರಿಗೆ 12ವರ್ಷ ವಯೋಮಾನ (ಜ್ಞಾನಾ ಧಾರಿತ) ವೆಂದು ನಿರ್ಧರಿಸುತ್ತಾರೆ. ಪೌರಾಣಿಕ ಜ್ಞಾನಿಗಳನ್ನು ಬಾಲಕರೆನ್ನುತ್ತಾರೆ, ಅವಿರಳ ಜ್ಞಾನಿ ಎಂದು ಹೆಸರಾಗಿದ್ದ ಚೆನ್ನಬಸವಣ್ಣನವರೇ ತಮಗಿನ್ನೂ ಬುದ್ದಿ ಬೆಳೆ ದಿಲ್ಲ ಎನ್ನುವಲ್ಲಿ ಅವರಜ್ಞಾನಕಿಂ-ಕರತೆಯನ್ನು ಕಾಣುತ್ತೇವೆ.ಹಿರಿತನವೆಂಬು ದು ಜ್ಞಾನದಿಂದ ಬರುವುದಲ್ಲದೇ ವಯಸ್ಸಿನಿಂದಲ್ಲ ಎಂಬುದು ವಚನದ ಆಶಯ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

**ರಾಷ್ಟ್ರೀಯ ಹೆದ್ದಾರಿಯಲ್ಲಿ ಒಂದು ಗಂಟೆ ರಸ್ತಾರೋಕ್ ಮಾಡಿದ ವಿದ್ಯಾರ್ಥಿಗಳು । ಸಂಚಾರ ಅಸ್ತವ್ಯಸ್ತ**

## ಬಸ್ ನಿಲುಗಡೆಗೆ ಆಗ್ರಹಿಸಿ ಹೆದ್ದಾರಿ ತಡೆದು ಎಬಿವ್ಹಿಪಿ ಪ್ರತಿಭಟನೆ

ಉದಯರಶ್ಮಿ ನ್ಯೂಸ್

ಇಂಡಿ: ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನಿಂದ ಬುಧವಾರ ವಿಜಯಪುರ ರಸ್ತೆಯ ರಾಷ್ಟ್ರೀಯ ಹೆದ್ದಾರಿಯಲ್ಲಿ ರಸ್ತಾರೋಕ್ ಮಾಡಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿ ಕೆ-ಎಸ್‌ಆರ್‌ಟಿಸಿ ವ್ಯವಸ್ಥಾಪಕ ಎಸ್.ಜಿ. ಬಿರಾದಾರ ಅವರಿಗೆ ಮನವಿ ನೀಡಿದರು.



ಸುಮಾರು ಒಂದು ಗಂಟೆಗಳ ಕಾಲ ರಸ್ತೆಗಳ ಮೇಲೆ ಬಸ್ಸುಗಳು ಹಾಗೂ ಸಾರ್ವಜನಿಕರ ವಾಹನಗಳು ಅಲ್ಲೇ ನಿಂತಿ-ದ್ದರಿಂದ. ಸಾರ್ವಜನಿಕರಿಗೆ ತೊಂದರೆ ಉಂಟಾಯಿತು.

ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕರು ಅತಿ ಶೀಘ್ರದಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬಸ್ ನಿಲ್ಲುಸುವಂತೆ ಒತ್ತಾಯಿಸಿದರು. ಒಂದು ವೇಳೆ ಮುಂದಿನ ದಿನಮಾನಗಳಲ್ಲಿ ಬಸ್ಸು ನಿಲ್ಲಿಸದಿದ್ದರೆ ರಾಷ್ಟ್ರೀಯ ಹೆದ್ದಾ-ರಿಯನ್ನು ಸಂಪೂರ್ಣ ಬಂದ್ ಮಾಡಿ ಪ್ರತಿಭಟಿಸಬೇಕಾಗುತ್ತದೆ ಎಂದು ವಿದ್ಯಾರ್ಥಿಗಳು ಆಗ್ರಹಿಸಿದರು.

> " ದಿನಾಲು ಬೆಳಗ್ಗೆ 29 ಬಸ್ಸುಗಳು ಸಂಜೆ 3ರಿಂದ 5ರವರೆಗೆ 24 ಬಸ್ಸುಗಳು ನಿಲ್ಲುವಂತೆ ಬಸ್ ಕಂಟ್ರೋಲ್ದಾರ, ಡ್ರೈವರ್ ಹಾಗೂ ಕಂಡಕ್ಟರ್‌ಗಳಿಗೆ ತಿಳಿಸಿದ್ದು, ಒಂದು ವೇಳೆ ಬಸ್ಸುಗಳನ್ನು ನಿಲ್ಲುವುದಿಲ್ಲ ಎಂದು ದೂರು ಬಂದರೆ ಅವರ ಮೇಲೆ ಕ್ರಮ ತೆಗೆದುಕೊಳ್ಳುತ್ತೇನೆ."
>
> – **ಎಸ್.ಜಿ. ಬಿರಾದಾರ,** ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ, ಇಂಡಿ.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನ ನಗರ ಘಟಕದ ಕಾರ್ಯದರ್ಶಿ ಸಚಿನ್ ಧಾನಗೊಂಡ ಮಾತನಾಡಿ, ಇಂಡಿ ತಾಲೂಕಿನಾದ್ಯಂತ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ತಮ್ಮ ಶಿಕ್ಷಣ ಪಡೆಯಲು ಪಟ್ಟಣಕೆ ನಿತ್ಯ ಬರುತ್ತಾರೆ. ವಿದ್ಯಾರ್ಥಿಗಳ ತರಗತಿಗಳು ಪ್ರಾರಂಭವಾದ ನಂತರ ವಿದ್ಯಾರ್ಥಿಗಳ ಬರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿದ್ದು, ಸರಿಯಾದ ಸಮಯಕ್ಕೆ ಬಸ್ ಪಾಸ್ ಹಾಗೂ ಇಂಡಿಯಿಂದ ವಿಜಯಪೂರ, ವಿಜಯಪುರದಿಂದ ಇಂಡಿಗೆ ಬರುವ ಬಸ್ಸುಗಳು ಆದರ್ಶ ವಿದ್ಯಾಲಯದಲ್ಲಿ ನಿಲ್ಲುವುದಿಲ್ಲ. ಆದರಿಂದ ವಿದ್ಯಾರ್ಥಿಗಳಿಗೆ ಶಾಲಾ-ಕಾಲೇಜಿಗೆ ಹೋಗು ಬರಲು ನಿತ್ಯ ತೊಂದರೆ ಉಂಟಾಗುತ್ತಿದ್ದು. ಆದ್ದರಿಂದ ವಿದ್ಯಾರ್ಥಿಗಳಿಗೆ ವಿದ್ಯಾರ್ಜನೆ ಮಾಡಲು ತುಂಬಾ ತೊಂದರೆ ಉಂಟಾಗುತ್ತಿದ್ದು



ವಿದ್ಯಾರ್ಥಿನಿ ಜ್ಯೋತಿ ಹಳಗುಣಕಿ ಮಾತನಾಡಿ, ಇಂಡಿ ಪಟ್ಟಣದಿಂದ ಸುಮಾರು 3 ಕಿ.ಲೋ. ದೊರದಲ್ಲಿರುವ ಸರಕಾರಿ ಡಿಗ್ರಿ ಕಾಲೇಜ, ಪಿಯು ಕಾಲೇಜ, ಆದರ್ಶ ವಿದ್ಯಾಲಯ, ಸರಕಾರಿ ಕೈಗಾ-ರಿಕ ತರಬೇತಿ ಕೇಂದ್ರ, ಅಲ್ಪಸಂಖ್ಯೆತರ ವಸತಿ ನಿಲಯ, ಕರ್ನಾಟಕ ಟೀಚರ ಬಿಈಡ್ ಶಾಲೇಜ ಸೇರಿದಂತೆ ಅನೇಕ ಶಾಲಾ, ಕಾಲೇಜುಗಳು ಇರುದರಿಂದ ಸುಮಾರು 3 ಸಾವಿರ ವಿದ್ಯಾರ್ಥಿಗಳು ರಸ್ತೆಯಲ್ಲಿ ನಿತ್ಯ ಗಂಟೆಗಟ್ಟಲೆ ಕಾಯುವ ಪರಿಸ್ಥಿತಿ ಉಂಟಾಗಿದ್ದು, ತೀವ್ರ ತೊಂದರೆ ಅನುಭವಿಸುವಂತಾಗಿದೆ. ಸರಿಯಾದ ಸಮಯಕ್ಕೆ ಬಸ್ ನಿಲ್ಲುವಂತೆ ವ್ಯವಸ್ಥಾಪಕ-ರಿಗೆ ವಿದ್ಯಾರ್ಥಿನಿ ಒತ್ತಾಯಿಸಿದರು.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿ ತಾಲೂಕಾ ಘಟಕದ ಸಂಚಾಲಕ ಸಮರ್ಥ ಗಾಯಕವಾಡ ಮಾತನಾಡಿ, ಆದರ್ಶ ಶಾಲೆಯಲ್ಲಿ ಸುಮಾರು 480 ವಿದ್ಯಾರ್ಥಿಗಳು, ಸರಕಾರಿ ಡಿಗ್ರಿ ಕಾಲೇಜಿನಲ್ಲಿ 1142 ವಿದ್ಯಾರ್ಥಿಗಳು, ಸರಕಾರಿ ಪಿಯು ಕಾಲೇಜಿನಲ್ಲಿ 700 ವಿದ್ಯಾರ್ಥಿಗಳು, ಬಿಈಡ್ ಕಾಲೇಜು 200 ವಿದ್ಯಾರ್ಥಿಗಳು, ಐಟಿಐ ಕಾಲೇಜು 150, ಏಂಜಲ್ಸ್ 500, ಅಲ್ಪಸಂಖ್ಯೆತರ ವಸತಿ ನಿಲಯದಲ್ಲಿ 100 ವಿದ್ಯಾರ್ಥಿಗಳು ತಾಲೂಕಿನಾದ್ಯಂತ ವಿವಿಧ ಗ್ರಾಮಗಳಿಂದ ನಿತ್ಯ ಸಾವಿರಾರು ವಿದ್ಯಾರ್ಥಿಗಳು ಪಟ್ಟಣಕ್ಕೆ ಆಗಮಿಸಿ ವಿದ್ಯಾರ್ಜನೆ ಮಾಡುತ್ತಾರೆ ಅವ-ರಿಗೆ ಅನುಕುಲವಾಗುವಂತೆ ಬಸುಗಳನ್ನು ಒಡಿಸಿ ಎಂದು ಆಗ್ರಹಿಸಿದ ಅವರು, ಎಲ್ಲ ಬಸ್‌ಗಳು ಎರಡು ಮೂರು ದಿನಗಳ ಒಳಗೆ ನಿಲ್ಲುವಂತೆ ಮಾಡದಿದ್ದರೆ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟಿಸುವುದಾಗಿ ಎಚ್ಚರಿಸಿದ್ದಾರೆ.

ಪ್ರತಿಭಟನಾಕಾರರು ವಿದ್ಯಾರ್ಥಿಗಳ ಬೇಡಿಕೆ ಪರಿಗಣಿಸದೆ ಇರುವ ಕೆ-ಎಸ್‌ಆರ್‌ಟಿಸಿ, ರಾಜ್ಯ ಸರ್ಕಾರ ನಡೆ ಖಂಡಿಸಿ ಘೋಷಣೆ ಕೂಗಿದರು.

> " ಶೈಕ್ಷಣಿಕ ಬೆಳವಣಿಗೆಯಿಂದ ಕ್ಷೇತ್ರ ಪ್ರಗತಿ ಮತ್ತು ಬದಲಾವಣೆ ಕಾಣಲು ಸಾಧ್ಯ ಎಂಬ ಚಿಂತನೆಯಿಂದ ಶಾಸಕ ಯಶವಂತರಾಯಗೌಡ ಪಾಟೀಲರವರು ಶೈಕ್ಷಣಿಕ ಹಬ್, ಆದರ್ಶ ಶಾಲೆ, ಸರಕಾರಿ ಪಿಯು ಕಾಲೇಜು, ಡಿಗ್ರಿ ಕಾಲೇಜು, ಐಟಿಐ ತರಬೇತಿ ಶಾಲೆ ಹಾಗೂ ವಿದ್ಯಾರ್ಥಿ ವಸತಿ ನಿಲಯಗಳು ಈ ಭಾಗದಲ್ಲಿ ಮಾಡಿದ್ದಾರೆ. ಅದಲ್ಲದೇ ಇದೇ ಭಾಗದಲ್ಲಿ ಎಂಜಲ್ಸ್ ಪ್ರಾಥಮಿಕ, ಪ್ರೌಢ ಹಾಗೂ ಕರ್ನಾಟಕ ಪ್ರಾಥಮಿಕ, ಪ್ರೌಢ ಮತ್ತು ಬಿಇಡಿ ತರಬೇತಿ ಕಾಲೇಜು ಇರುವುದ-ರಿಂದ ಸುಮಾರು 4 ಸಾವಿರ ವಿದ್ಯಾರ್ಥಿಗಳು ಜ್ಞಾನಾರ್ಜನೆ ಪಡೆಯುತ್ತಿದ್ದಾರೆ. ಹಾಗಾಗಿ ಈ ಕೂಡಲೇ ಅಧಿಕಾರಿಗಳು ವಿಧ್ಯಾರ್ಥಿಗಳಿಗೆ ಶೈಕ್ಷಣಿಕ ವೇಳಾಪಟ್ಟಿಗೆ ಅನುಗುಣವಾಗಿ ಬಸ್ ಸೌಕರ್ಯ ಒದಗಿಸಬೇಕೆಂದು ಮನವಿ ಮಾಡಿಕೊಳ್ಳುತ್ತೆನೆ. ಹಾಗೂ ಈ ಬಗ್ಗೆ ಶಾಸಕರ ಗಮನಕ್ಕೆ ತರುತ್ತೆನೆ."
>
> – **ಹುಚ್ಚಪ್ಪ ತಳವಾರ,** ಕಾಂಗ್ರೆಸ್ ಮುಖಂಡ.

ಇಂಡಿಯಿಂದ ವಿಜಯಪುರ, ವಿಜಯಪುರದಿಂದ ಇಂಡಿ ಮಾರ್ಗವಾಗಿ ಪಟ್ಟಣಕ್ಕೆ ಬರುವ ಹೋಗುವ ಬಸ್ಸುಗಳು ಪ್ರಯಾಣಿಕರಿಂದ ತುಂಬಿರುತ್ತವೆ. ಈ ಕಾರಣದಿಂದ ಆದರ್ಶ ವಿದ್ಯಾಲಯದ ಬಳಿ ಬಸ್‌ಗಳ ನಿಲುಗಡೆ ಆಗುತ್ತಿಲ್ಲ. ಇದ-ರಿಂದ ಕಾಲ್ನಡಿಗೆ ಅಥವಾ ಪ್ರಯಾಣಿಕರ ಆಟೊಗಳಲ್ಲಿ ತೆರಳುವ ಪ್ರಸಂಗ ಬಂದಿದ್ದು, ವಿದ್ಯಾರ್ಥಿಗಳು ಸಮಯಕ್ಕೆ ಶಾಲಾ ಕಾಲೇಜಿಗೆ ತಲುಪಲು ಆಗುತ್ತಿಲ್ಲ. ಆದ-ರಿಂದ ಶಾಲಾ, ಕಾಲೇಜು ವಿದ್ಯಾರ್ಥಿಗಳ ಪ್ರಯಾಣಕ್ಕೆ ಅನುಕೂಲವಾಗುವಂತೆ ಬೆಳಗ್ಗೆ ಮತ್ತು ಸಂಜೆ ಹೆಚ್ಚುವರಿ ಬಸ್ ಸೇವೆ ಒದಗಿಸಬೇಕು ಎಂದು ಒತ್ತಾಯಿಸಿದರು.

ತಮ್ಮ ಸಮಸ್ಯೆ ಬಗೆಹರಿಸಲು ಕಂದಾಯ ಉಪವಿಭಾಗ ಅಧಿಕಾ-ರಿಗಳು ಸ್ಥಳಕ್ಕಾಗಮಿಸಬೇಕು ಎಂದು ಪಟ್ಟು ಹಿಡಿದರು.

ನಂತರ ಸ್ಥಳಕ್ಕಾಗಮಿಸಿದ ಸಾರಿಗೆ ಸಂಸ್ಥೆ ಅಧಿಕಾರಿಗಳು ನಾಳೆಯಿಂದಲೇ ಹೆಚ್ಚುವರಿ ಬಸ್ ಸೇವೆ ಒದಗಿಸುವ ಭರವಸೆ ನೀಡಿದ ನಂತರ ಪ್ರತಿಭಟನೆ ಹಿಂತೆಗೆದುಕೊಳ್ಳಲಾಯಿತು.

ಪ್ರತಿಭಟನೆಯಲ್ಲಿ ವಿಶಾಲ ಸಿಂಧೆ, ಚಿದಾನಂದ ತೋಳನೂರ, ಚಂದ್ರಕಾಂತ ಕಾಂಬಳೆ, ಅರುಣ ಪೂಜಾರಿ, ಅಂಬ್ಬಣ ಪೂಜಾರಿ, ಪರಮೇಶ ಮುದೋಳ ಸೇರಿದಂತೆ ನೂರಾರು ವಿದ್ಯಾರ್ಥಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಕೆಬಿಜೆಎನ್‌ಎಲ್ ಎಂಡಿ ಭರವಸೆ :ಗುತ್ತಿಗೆದಾರರ ಧರಣಿ ಅಂತ್ಯ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ಇಲ್ಲಿನ ಕೆಬಿಜೆಎನ್‌ಎಲ್ ಮುಖ್ಯ ಎಂಜಿನಿಯರ್ ಕಚೇರಿ ಎದುರು ನಾನಾ ಬೇಡಿಕೆ ಈಡೇರಿಕೆಗೆ

ಆಗ್ರಹಿಸಿ ಕೃಷ್ಣಾತೀರ ಗುತ್ತಿಗೆದಾರರ ಸಂಘದ ಆಶ್ರಯದಲ್ಲಿ ಜೂ.19ರಿಂದ

ಗುತ್ತಿಗೆದಾರರು ಹಮ್ಮಿಕೊಂಡಿದ್ದ ಅನಿರ್ದಿಷ್ಟಾವಧಿ ಧರಣಿಯು ಕೃಷ್ಣಾ ಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮೋಹನರಾಜ್ ಕೆ.ಪಿ. ಅವರ ಭರವಸೆ ಮೇರೆಗೆ ಬುಧವಾರ ಅಂತ್ಯಗೊಳಿಸಿದರು.



ಧರಣಿ ಸ್ಥಳಕ್ಕೆ ಕೆಬಿಜೆಎನ್‌ಎಲ್ ಎಂಡಿ ಆಗಮಿಸಿದಾಗ ಧರಣಿ ನಿರತರು ತಮ್ಮ ನಾನಾ ಬೇಡಿಕೆ ಈಡೇರಿಸುವಂತೆ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿದ ಎಂಡಿ ಮೋಹರಾಜ ಕೆ.ಪಿ. ಮಾತನಾಡಿ, ಕಳೆದ ವರ್ಷದಲ್ಲಿ ಕರೆಯಲಾದ ಎಲ್ಲ ಕಾಮಗಾ-ರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ ಪಾರದರ್ಶಕ ಕಾಯ್ದೆ ಅನುಸಾರ ಕ್ರಮಕೈಗೊಂಡು ಕಾಮಗಾರಿಗಳ ಬಿಡ್‌ನಲ್ಲಿ ಭಾಗವಹಿಸಿದ ಗುತ್ತಿಗೆದಾರರ ಮುಂಗಡ ಹಣವನ್ನು ಆಂ ಯಾ ಗುತ್ತಿಗೆದಾರರಿಗೆ ಮರಳಿಸಲಾಗಿದೆ. ಕಾಲುವೆಗಳ ದುರಸ್ತಿ, ನೂತನ ಮುಖ್ಯ ಕಾಲುವೆ, ವಿತರಣಾ ಕಾಲುವೆ, ಸೀಳು ಕಾಲುವೆ, ಉಪಕಾಲುವೆಗಳ ನಿರ್ಮಾಣ ಕಾಮಗಾರಿಗಳನ್ನು ಪ್ಯಾಕೇಜ್ ಪದ್ಧತಿಗೆ ಅಳವಡಿಸದೆ ವಿಂಗಡಣೆ ಮಾಡಿ ಟೆಂಡರ್ ಕರೆಯುವುದು ಸೇರಿದಂತೆ ಇತರೆ ಎಲ್ಲ ಬೇಡಿಕೆಗಳನ್ನು ಕಾನೂನು ಚೌಕಟ್ಟಿನಲ್ಲಿ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಅಧ್ಯಕ್ಷ ಎಂ.ಎ.ಮೇಟಿ, ಉಪಾಧ್ಯಕ್ಷ ಎಸ್.ಎಸ್.ಗದಿಗೆಪ್ಪಗೌಡರ, ಕಾರ್ಯದರ್ಶಿ ವೈ.ವೈ.ಬಿರಾದಾರ, ಪ್ರಧಾನ ಕಾರ್ಯದರ್ಶಿ ವೆಂಕಟೇಶ ನಾಯಕ, ಖಜಾಂಚಿ ಬಸವರಾಜ

ದಂಡಿನ, ಗೋಪಾಲ ಬಂಡಿವಡ್ಡರ, ಮಹಾಂತೇಶ ಡೆಂಗಿ. ಮಹಾಂತೇಶ ಬೆಳಗಲ್ಲ, ಬಸವರಾಜ ಬಿರಾದಾರ,

ಸಂತೋಷ ಪಾಟೀಲ, ಮುತ್ತು ಕಿರಸೂರ, ಎಂ.ಡಿ.ಆಲಮಟ್ಟಿ, ಮಕಸೂದ ಮಕಾನದಾರ, ಬಿ.ಟಿ.ರಾಠೋಡ, ಹನುಮಂತ ಪೂಜಾರಿ, ಸಂತೋಷ ಲಮಾಣಿ, ಯಲ್ಲಪ್ಪ ನಾಗರಾಳ, ಸಿ.ಜಿ.ವಿಜಯಕರ, ವಿ.ಎಂ.ಹಿರೇಮಠ, ಜಕ್ಕಪ್ಪ ಮಾಗಿ, ಟಿ.ಎಸ್.ಅಫಜಲಪುರ, ಕೆ.ವಿ.ಶಿವಕುಮಾರ, ಬಸವರಾಜ ಬಾದರದಿನ್ನಿ ಇತರರಿದ್ದರು.

## ನೂತನ ಹೈಟೆಕ್ ಗ್ರಂಥಾಲಯ ಪ್ರಾರಂಭ ಸ್ವಾಗತಾರ್ಹ :ದವಿಪ

ಉದಯರಶ್ಮಿ ನ್ಯೂಸ್

ವಿಜಯಪುರ : ವಿಜಯಪುರ ನಗರದ ಕೇಂದ್ರ ಭಾಗದಲ್ಲಿ ನೂತನವಾಗಿ ಪ್ರಾರಂಭವಾಗಿರುವ ಹೈಟೆಕ್ ಗ್ರಂಥಾಲಯಕ್ಕೆ ದಲಿತ ವಿದ್ಯಾರ್ಥಿ ಪರಿಷತ್ ಹೋರಾಟದ ಪ್ರತಿಫಲ ಸಿಕ್ಕಿದೆ ಎಂದು ಪರಿಷತ್ ಜಿಲ್ಲಾ ಸಂಚಾಲಕ ಅಕ್ಷಯ್ ಕುಮಾರ್ ಅಜಮನಿ ಅವರು ಮಾತನಾಡಿದರು.



ನಗರದ ನೆಹರೂ ಕಾಂಪ್ಲೆಕ್ಸನಲ್ಲಿರುವ ಹಳೆಯ ಗ್ರಂಥಾಲಯ ಓದಲು ಯೋಗ್ಯವಿರಲಿಲ್ಲ, ಅಲ್ಲಿ ಪ್ರತಿದಿನ ನೂರಾರು ವಿದ್ಯಾರ್ಥಿಗಳು, ಹಿರಿಯರು ಓದಲು ಬರುತ್ತಿದ್ದರು ಅವರಿಗೆ ಗ್ರಂಥ-ಾಲಯದಲ್ಲಿ ಓದಲು ಪುಸ್ತಕಗಳಿಲ್ಲದೆ, ಕೂಡಲು

4ನೇ ಪುಟಕ್ಕೆ

**ಮಣೂರ ಸರ್ಕಾರಿ ಪ್ರಾಥಮಿಕ ಶಾಲೆ ಮಕ್ಕಳು । ಮಧ್ಯಾನ್ಹದ ಬಿಸಿಯೂಟದ ವಿಳಂಬತೆ । ಶಾಲೆಗೆ ಸರಿಯಾಗಿ ಬಾರದ ಮುಖ್ಯಗುರು**

## ಪ್ರಾಥಮಿಕ ಶಾಲಾ ಮಕ್ಕಳಿಂದ ಧರಣಿ–ಪ್ರತಿಭಟನೆ :ಬಿಇಓ ಭೇಟಿ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ಮಕ್ಕಳು ಮಧ್ಯಾನ್ಹದ ಬಿಸಿಯೂಟದ ವಿಳಂಬತೆ, ಪ್ರಭಾರಿ ಮುಖ್ಯಗುರು ಶಾಲೆಗೆ ಸರಿಯಾಗಿ ಬಾರದೇ, ಪಾಠ ಮಾಡದಿರುವ ಕುರಿತು ಬೇಸತ್ತು ಶಾಲಾ ಆವರಣದಲ್ಲಿ ಧರಣಿ ಕುಳಿತು ಪ್ರತಿಭಟಿಸಿದರು.

ತಾಲ್ಲೂಕಿನ ಮಣೂರ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ಮಕ್ಕಳು ಬುಧವಾರ ಶಾಲೆಯ ತಮ್ಮ ಶೈಕ್ಷಣಿಕ ಕುಂದುಕೊರತೆಗಳ ಕುರಿತು ಅಸಮಾಧಾನ ವ್ಯಕ್ತಪಡಿಸಿದರು.



ಈ ಸಂದರ್ಭದಲ್ಲಿ ಮಕ್ಕಳಾದ ರಕ್ಷಿತಾ ಜೋಗೂರ, ಹಣಮಂತ ಹಿರೇಕುರುಬರ ಮಾತನಾಡಿ, ಮಧ್ಯಾನ್ಹದ ಬಿಸಿಯೂಟ ಸರಿಯಾಗಿ ವಿತರಿಸುತ್ತಿಲ್ಲ. ಶಾಲೆಯ ಪ್ರಭಾರ ಮುಖ್ಯಗುರು ಜಯಶ್ರೀ ನಾಯಿಕ ಸರಿಯಾದ ಸಮಯಕ್ಕೆ ಶಾಲೆಗೆ ಬರುತ್ತಿಲ್ಲ. ಇದರಿಂದ ಪಾಠಗಳಿಗೆ ಅಡತಡೆಯಾಗಿದೆ. ಕೂಡಲೇ ಇವುಗಳನ್ನು ಸರಿಪಡಿಸಲು ಆಗ್ರಹಿಸಿದರು.

ಮಕ್ಕಳ ಧರಣಿ ಹಾಗೂ ಪ್ರತಿಭಟನೆಯ ಸುದ್ದಿ ತಿಳಿದು ಸ್ಥಳಕ್ಕೆ ಆಗಮಿಸಿದ ಬಿಇಓ ಆರೀಫ್ ಬಿರಾದಾರ ಹಾಗೂ ಎಸ್‌ಡಿ-ಎಮ್‌ಸಿ ಅಧ್ಯಕ್ಷರು ಹಾಗೂ ಪಾಲಕರು ಶಿಕ್ಷಕಿ ಜಯಶ್ರೀಯನ್ನು ತರಾಟೆಗೆ ತೆಗೆದುಕೊಂಡು ಮಕ್ಕಳ ಬೇಡಿಕೆಯಂತೆ ಪ್ರಭಾರಿ ಮುಖ್ಯಗುರು ಸ್ಥಾನವನ್ನು ಎಸ್.ಎಚ್.ಬಿರಕಗಡ್ಡಿ ಅವರಿಗೆ ವಹಿಸಿ ಯಾವುದೇ ಕುಂದು ಕೊರತೆಗಳಾಗದಂತೆ ಗಮನ ಹರಿಸಲು ಆದೇಶಿಸಿದರು.

ಮಕ್ಕಳಾದ ರೂಪಾ ಬೇನಾಳ, ಚಂದ್ರಿಕಾ ಮರಾಠಿ, ಪೂಜಾ ಕನ್ನೊಳ್ಳಿ, ಸಂಕೇತ ಸಿಂದಗಿ, ಐಶ್ವರ್ಯ ಹಡಪದ, ನಿಂಗರಾಜ ನಾಗಾವಿ, ಎಸ್‌ಡಿಎಮ್‌ಸಿ ಅಧ್ಯಕ್ಷ ಸೋಮಯ್ಯ ನಂದಿಕೋಲ, ಪಾಲಕರಾದ ಆನಂದ ಪೂಜಾರಿ, ರಾಮು ಸಿಂದಗಿ, ಅಶೋಕ ಮಣೂರ, ರವಿ ಸಿಂದಗಿ, ಹಣಮಂತ ವಾಲಿಕಾರ, ಅಬ್ಬಾಸ ಬಾಗವಾನ, ಶಾಂತು ಬಜಂತ್ರಿ, ರವಿ ತಳವಾರ ಇದ್ದರು.

# ಜೂ.27ರಂದು ಜಿಲ್ಲಾಡಳಿತದಿಂದ ಕೆಂಪೇಗೌಡ ಜಯಂತಿ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಜೂ.27ರಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೆಂಪೇಗೌಡ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿರುವ ಜಯಂತಿ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾ–ರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಂ.ಬಿ.ಪಾಟೀಲ ಉದ್ಘಾಟಿಸಲಿದ್ದಾರೆ. ವಿಜಯಪುರ ನಗರ ಶಾಸಕ ಬಸನಗೌಡ ಆರ್.ಪಾಟೀಲ (ಯತ್ನಾಳ) ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ, ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ–2 ಹಾಗೂ ವಿಧಾನ ಪರಿಷತ್ ಸದಸ್ಯರಾದ ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತ ಅಧ್ಯಕ್ಷರೂ ಆದ ಶಾಸಕ ಅಪ್ಪಾಜಿ ಸಿ.ಎಸ್.ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ, ರಾಜ್ಯಸಭಾ ಸಂಸದರಾದ ಶ್ರೀಮತಿ ಸುಧಾ ಮೂರ್ತಿ, ಶಾಸಕರುಗಳಾದ ಯಶವಂತರಾಯಗೌಡ ಪಾಟೀಲ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ವಿಠ್ಠಲ ಕಟಕಧೋಂಡ, ಭೀಮನಗೌಡ (ರಾಜುಗೌಡ) ಬಸನಗೌಡ ಪಾಟೀಲ, ಅಶೋಕ ಮಲ್ಲಪ್ಪ ಮನಗೂಳಿ, ಮಹಾನಗರ ಪಾಲಿಕೆ ಮಹಾಪೌರರಾದ ಶ್ರೀಮತಿ ಮಹೇಜಬಿನ ಹೊರ್ತಿ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯ್ಕ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನಾನ್ ಅಬ್ದುಲಹಮೀದ್ ಮುಶ್ರೀಫ್ ಸೇ–ರಿದಂತೆ ವಿವಿಧ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ.



ಕಾರ್ಯಕ್ರಮದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಜಿಲ್ಲಾ ಅಧಿಕಾರಿ ರಾಜಶೇಖರ ಧೈವಾಡಿ ವಿಶೇಷ ಉಪನ್ಯಾಸ ನೀಡಲಿದ್ದಾರೆ. ಗಾಯಕರಾದ ವಿರೇಶ ವಾಲಿ ಸುಗಮ ಸಂಗೀತ ನಡೆಸಿಕೊಡಲಿದ್ದಾರೆ.

# ಅಪ್ರಾಪ್ತರೇ ಅತಿ ಹೆಚ್ಚು ಮಾದಕ ವ್ಯಸನಿಗಳು :ಪಿಎಸ್ಯೆ ರಾಠೋಡ್

ಉದಯರಶ್ಮಿ ನ್ಯೂಸ್

ಕೆಂಭಾವಿ: ಮಾದಕ ವಸ್ತುಗಳಾದ ಗಾಂಜಾ, ಅಫೀಮು, ಗಸಗಸೆ ಸೋಪು, ನಿದ್ರೆ ಮಾತ್ರೆ, ಸೇವನೆಯು ಆರೋಗ್ಯಕ್ಕೆ ಹಾನಿಕಾರಕ, ಇವುಗಳ ವಿರುದ್ದ ಯುವಜನತೆ ಧ್ವನಿ ಎತ್ತಬೇಕು ಎಂದು ಪಿಎಸ್ಯೆ ರಾಜಶೇಖರ ರಾಠೋಡ್ ಹೇಳಿದರು.



ಪಟ್ಟಣದ ಶ್ರೀಮತಿ ಗಂಗಾಬಾಯಿ ಶಾಂತಗೌಡ ಪೋಲೀಸ್ ಪಾಟೀಲ್ ಮೆಮೋರಿಯಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಯಾದಗಿರಿ ಜಿಲ್ಲಾ ಪೋಲೀಸ್ ಮತ್ತು ಕೆಂಭಾವಿ ಪೋಲೀಸ್ ಠಾಣೆ ಸಹಯೋಗದಲ್ಲಿ ಬುಧವಾರ ಆಯೋಜಿಸಿದ್ದ "ಮಾದಕ ದ್ರವ್ಯಗಳ ಸೇವನೆ ಮತ್ತು ಸಾಗಣಿಕೆ ವಿರುದ್ಧ ದಿನ" ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ 16 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ಮಾದಕ ವಸ್ತುಗಳ ವ್ಯಸನಿಗಳಾಗಿ, ದಿನಕ್ಕೆ ಹತ್ತು ಜನರು ಆತ್ಮಹತ್ಯೆ ಮಾಡಿಕೊಳುತ್ತಾರೆ ಎಂದವರು. ಅಕ್ರಮವಾಗಿ ಮಾದಕ ವಸ್ತುಗಳ ಮಾರಾಟ ಮತ್ತು ಸಾಗಾಟ ಅಕ್ಷಮ್ಯ ಅಪರಾಧ ಎನ್ನುತ್ತಾ, ಅನೇಕ ಕಾನೂನಾತ್ಮಕ ವಿಷಯಗಳ ಮೇಲೆ ಬೆಳಕು ಚೆಲ್ಲುತ್ತಾ, ವಿದ್ಯಾರ್ಥಿಗಳು ದುಶ್ಚಟಗಳಿಗೆ ಬಲಿಯಾಗದೆ ಮಾದರಿ ವ್ಯಕ್ತಿಯಾಗಿ ನಾಳೆ ನಾಡ ನಾಯಕರಾಗುವಂತೆ ಕರೆ ನೀಡಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲ ಡಾ ನಾಗಪ್ಪ ಚಾವಲ್ಕರ್, ಮದ್ಯಪಾನ ಧೂಮಪಾನ ಸಹವಾಸ ಹೆಂಡಿರು ಮಕ್ಕಳು ಉಪವಾಸ ಎಂಬಂತೆ, ವಿದ್ಯಾರ್ಥಿಗಳು ನಶೆ ಮುಕ್ತ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು. ಅತ್ಯಮೂಲ್ಯ ವಿದ್ಯಾರ್ಥಿ ಜೀವನ ಹಾಳಾಗದಂತೆ ಎಚ್ಚರಿಕೆ ಹೆಜ್ಜೆ ಇಡುವುದು ಒಳ್ಳೆಯದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಡಾ ನಂದಾ ವಾರದ, ಡಾ ಬಸಮ್ಮ ಎಸ್, ನಸ್ರೀನ್ ತಾಜ್, ಡಾ ಯಂಕನಗೌಡ ಎಸ್, ಡಾ ಉಪೇಂದ್ರ ನಾಯಕ್, ಮ–ರಿಸ್ವಾಮಿ, ಮಲ್ಲಿಕಾರ್ಜುನ ಕಲಾಲ್, ಮಾಸುಮ ಅಲಿ ನಾಶಿ, ಸಂಗಣ್ಣ ಪಟ್ಟಣಕರ್, ಸೇರಿದಂತೆ ಬಿಎ ಬಿಕಾಂ ಬಿಎಸ್ಸಿ ಓದುತ್ತಿರುವ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತ–ರಿದ್ದರು.

# ವಿಶ್ವ ಮಾದಕ ವಸ್ತುಗಳ ಸೇವನೆ & ಕಳ್ಳಸಾಗಾಣಿಕೆ ವಿರೋಧಿ ಸಪ್ತಾಹ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಷ್ಟ್ರೀಯ ಮಾನಸಿಕ ಆರೋಗ್ಯ ಕಾರ್ಯಕ್ರಮದ ಅಡಿಯಲ್ಲಿ ಅಂತರ್‌ರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳ ಸಾಗಾಣಿಕೆ ವಿರೋಧಿ ಸಪ್ತಾಹ ದಿನಾಚರಣೆ ಅಂಗವಾಗಿ ಬುಧವಾರ ನಗರದಲ್ಲಿ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಯಿತು.




ಜಾಗೃತಿ ಜಾಥಾಕ್ಕೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಧಾನ ಹಿರಿಯ ಸಿವ್ಹಿಲ್ ನ್ಯಾಯಾಧೀಶ ಮಲ್ಲಿಕಾರ್ಜುನ ಅಂಬ್ಲಿ, ಉಪ ಪೋಲಿಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಬಸವರಾಜ ಹುಬ್ಬಳ್ಳಿ ಜಂಟಿಯಾಗಿ ಚಾಲನೆ ನೀಡಿದರು.

ನಗರದ ಸಿದ್ದೇಶ್ವರ ದೇವಸ್ಥಾನದಿಂದ ಆರಂಭಗೊಂಡ ಜಾಥಾವು, ನಗರದ ಗಾಂಧಿವೃತ್ತದ ಮಾರ್ಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯವರೆಗೆ ಸಾಗಿ, ದಾರಿಯುದ್ದಕೂ ಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಮನೋವೈದ್ಯರಾದ ಡಾ.ಮಂಜುನಾಥ ಮಸಳಿ ಮಾತನಾಡಿ, ಮಾದಕ ವಸ್ತುಗಳ ಸೇವನೆಯಿಂದ ಯುವ ಜನಾಂಗದ ಮೇಲೆ ದುಷ್ಪ–ರಿಣಾಮ ಬೀರುತ್ತಿದ್ದು, ಯುವ ಜನಾಂಗ ಮಾದಕ ವಸ್ತುಗಳಿಂದ ದೂರವಿರುವಂತೆ ಅವರು ಸಲಹೆ ನೀಡಿದ ಅವರು, ಉಚಿತ ಸಹಾಯವಾಣಿ 14416 ಸಂಖ್ಯೆಗೆ ಸಂಪರ್ಕಿಸಿ ಮಾಹಿತಿ ಪಡೆಯುವಂತೆ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಡಾ.ಸಂಪತ್ ಗುಣಾರಿ, ಡಾ.ಕವಿತಾ ದೊಡಮನಿ, ಡಾ.ಪರಶುರಾಮ ಹಿಟ್ನಳ್ಳಿ, ಜಿ.ಎಂ. ಕೋಲೂರ ಸೇರಿದಂತೆ ಜಿಲ್ಲಾ ಮಾನಸಿಕ ಕಾರ್ಯಕ್ರಮ ಸಿಬ್ಬಂದಿಗಳು, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ–ಸಿಬ್ಬಂದಿಗಳು, ಬಿಎಲ್‌ಡಿಇಎ ಬಿ.ಎಂ.ಪಾಟೀಲ ನರ್ಸಿಂಗ್ ಕಾಲೇಜ್, ತುಳಜಾಭವಾನಿ ನರ್ಸಿಂಗ್ ಕಾಲೇಜ್ ವಿದ್ಯಾರ್ಥಿಗಳು ಇತರರು ಉಪಸ್ಥಿತರಿದ್ದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದಲ್ಲಿ ಜರುಗಿದ ಸಮಾರೋಪದಲ್ಲಿ ಸುರೇಶ ಹೊಸಮನಿ ವಂದಿಸಿದರು.

## ಜೂ.28ರಂದು ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ

ವಿಜಯಪುರ: ಕೆಪಿಟಿಸಿಎಲ್ ವತಿಯಿಂದ ಜೂ.28ರಂದು 110/11 ಕೆವ್ಹಿ ಕೆಐಎಡಿಬಿ, ಭೂತನಾಳ, ಜುಮನಾಳ ಹಾಗೂ ವಿಜಯಪುರ ನಗರ ಮತ್ತು 220/110 ಕೆವ್ಹಿ ವಿದ್ಯುತ್ ವಿತರಣಾ ಕೇಂದ್ರದ ಮೊದಲನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಸದರಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೋಗುವ ಎಲ್ಲ 11 ಕೆವ್ಹಿ ಮಾರ್ಗಗಳಿಗೆ ಅಂದು ಮಧ್ಯಾಹ್ನ 2 ರಿಂದ 6–30 ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ವಿಜಯಪುರ ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರರು ಕೋರಿದ್ದಾರೆ.

# ಜೂ.30ರಂದು ಶೈಕ್ಷಣಿಕ ಜಾಗೃತಿ ಸಮಾವೇಶ & ಪ್ರತಿಭಾ ಪುರಸ್ಕಾರ

ಉದಯರಶ್ಮಿ ನ್ಯೂಸ್

ವಿಜಯಪುರ: ಬಹುಜನ ದಲಿತ ಸಂಘರ್ಷ ಸಮಿತಿ (ರಿ), ವಿಜಯಪುರ ಜಿಲ್ಲಾ ಸಮಿತಿ ವತಿಯಿಂದ ಡಾ.ಬಿ.ಆರ್. ಅಂಬೇಡ್ಕರ ರವರ 133ನೇ ವರ್ಷದ ಜಯಂತಿ ಹಾಗೂ ಜಗಜ್ಯೋತಿ ಬಸವೇಶ್ವರ ಜಯಂತಿ ಪ್ರಯುಕ್ತ ಶೈಕ್ಷಣಿಕ ಜಾಗೃತಿ ಸಮಾವೇಶ ಹಾಗೂ ಡಾ. ವಿಜಯಲಕ್ಷ್ಮೀ ಪಾಟೀಲ ರವರು ರಚಿಸಿದ ಅನಿತಾ ದೇಸಾಯಿ □□□ನ್ ಇಂಡಿಯನ್ ನೋವೆಲಿಸ್ಟ್ ಎಂಬ ಕೃತಿ ಬಿಡುಗಡೆ ಮತ್ತು ಸನ್ 2023–24ನೇ ಸಾಲಿನ ಎಸ್.ಎಸ್.ಎಲ್.ಸಿ.ಶೇ.85 ರಷ್ಟು ಮತ್ತು ದ್ವಿತೀಯ ಪಿ.ಯು.ಸಿ.ಶೇ. 90 ರಷ್ಟು ಯಲ್ಲಿ ಹೆಚ್ಚಿನ ಅಂಕಗಳನ್ನು ಪಡೆದುಕೊಂಡ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ದಿ : 30–06–2024 ರಂದು ಬೆಳಿಗ್ಗೆ 11.30 ಗಂಟೆಗೆ ವಿಜಯಪುರ ನಗರದ ಕಂದಗಲ್ ಹಣಮಂತ್ರಾಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.




ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಬಹುಜನ ದಲಿತ ಸಂಘರ್ಷ ಸಮಿತಿ ಮುಖಂಡರು, ಕಳೆದ ಎರಡು ದಶಕಗಳಿಂದ ಇಲ್ಲಿಯವರೆಗೆ ಬಹುಜನ ದಲಿತ ಸಂಘರ್ಷ ಸಮಿತಿ (ರಿ) ರಾಜ್ಯಾದ್ಯಂತ ಸಾಮಾಜಿಕ, ಶೈಕ್ಷಣಿಕ, ರಾಜಕೀಯ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಬಹುಜನರ ಹಿತಕ್ಕಾಗಿ ಗಣನೀಯ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಅವರನ್ನು ಗೌರವಿಸುತ್ತಾ ಬಂದಿದೆ. ಆದಕಾರಣ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಶೇ.85 ರಷ್ಟು ಹಾಗೂ ದ್ವಿತೀಯ ಪಿ.ಯು.ಸಿ. ಪರೀಕ್ಷೆಯಲ್ಲಿ ಶೇ.90 ರಷ್ಟು ಅಂಕಗಳನ್ನು ಪಡೆದ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಜೂನ್. 28ರ ಒಳಗಡೆ ತಮ್ಮ ಸ್ವವಿವರಗಳೊಂದಿಗೆ ಮೊಬೈಲ್ ನಂ. 9980306375, 7619310926 ಹಾಗೂ ಆರ್ಯಭಟ್ಟ ಕರಿಯರ್ ಅಕಾಡೆಮಿ, ವಿಜಯಪುರ ಮೀನಾಕ್ಷಿ ಚೌಕ್ ಓಂ ಶಾಂತಿ ಕಚೇರಿ ಹತ್ತಿರ, ಮಲಘಾಣ ಬಿಲ್ಡಿಂಗ್, ವಿಜಯಪುರ ಈ ವಿಳಾಸಕ್ಕೆ ಸಂಪರ್ಕಿಸಬಹುದೆಂದು ದಲಿತ ಸಂಘಟನೆಗಳ ಮಹಾ ಒಕ್ಕೂಟದ ಅಧ್ಯಕ್ಷ ಪರಶುರಾಮ ಲಂಬು, ಉತ್ತರ ಕರ್ನಾಟಕ ಅಧ್ಯಕ್ಷ ರಾಜಶೇಖರ ಕುದರಿ ಎಂ.ಆರ್. ದೊಡಮನಿ, ಜಿಲ್ಲಾಧ್ಯಕ್ಷರು, ಇವರು ತಿಳಿಸಿದರು.

ಈ ಸಂದರ್ಭದಲ್ಲಿ ಉತ್ತರ ಕರ್ನಾಟಕ ಕಾರ್ಯಾಧ್ಯಕ್ಷ ಪರಶುರಾಮ ಗರಸಂಗಿ, ಜಿಲ್ಲಾ ಉಪಾಧ್ಯಕ್ಷರಾದ ಶಿವಶರಣ ಕೆಂಗನಾಳ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಶ್ರೀಮತಿ ಜಯಶ್ರೀ ಬ್ಯಾಕೋಡ, ಉತ್ತರ ಕರ್ನಾಟಕ ಮಹಿಳಾ ಘಟಕ ಅಧ್ಯಕ್ಷರಾದ ಡಾ.ವಿಜಯಲಕ್ಷ್ಮೀ ಪಾಟೀಲ, ಜಿಲ್ಲಾ ಮಹಿಳಾ ಘಟಕ ಉಪಾಧ್ಯಕ್ಷೆ ಅಕ್ಕಮಹಾದೇವಿ ಪಾಟೀಲ ಇನ್ನಿತರರು ಉಪಸ್ಥಿತರಿದ್ದರು.

# ಪರೀಕ್ಷಾ ಅಕ್ರಮಗಳು




ಉದಯರಶ್ಮಿ ದಿನಪತ್ರಿಕೆ

ಅರ್ಹರನ್ನು ಗುರುತಿಸಲಾರದಷ್ಟು ಭ್ರಷ್ಟಗೊಂಡ ವ್ಯವಸ್ಥೆ..

ಭಾರತ ಈ ಕ್ಷಣದಲ್ಲಿ, ಅಂತರಾಷ್ಟ್ರೀಯ ಮಟ್ಟದಲ್ಲಿ ಸಾಕಷ್ಟು ಮುಂದುವರಿಯುತ್ತಿದೆ, ಬೆಳೆಯುತ್ತಿದೆ, ಅಭಿವೃದ್ಧಿ ಹೊಂದುತ್ತಿದೆ, ವಿಶ್ವಗುರು ಪಟ್ಟಕ್ಕೆ ಮುನ್ನಡೆಯುತ್ತಿದೆ ಎಂದು ಏನೇ ಹೇಳಿದರು ಸಹ ಆಂತರಿಕವಾಗಿ ಶೈಕ್ಷಣಿಕವಾಗಿಯೇ ಆಗಿರಲಿ, ಉದ್ಯೋಗಕ್ಕಾಗಿಯೇ ಆಗಿರಲಿ ಪರೀಕ್ಷೆಗಳನ್ನು ನಡೆಸಿ ಅರ್ಹರನ್ನು ಆಯ್ಕೆ ಮಾಡುವ ಪ್ರಕ್ರಿಯೆ ಸಂಪೂರ್ಣ ವಿಫಲವಾಗಿದೆ ಅಥವಾ ನಿರಾಶದಾಯಕವಾಗಿದೆ ಅಥವಾ ಜನರ ನಂಬಿಕೆ ಕಳೆದುಕೊಂಡು ಅನುಮಾನ ಹುಟ್ಟಿಸುತ್ತಿದೆ ಅಥವಾ ಭ್ರಮನಿರಸನವಾಗಿದೆ..

ಉದ್ಯೋಗಕ್ಕಾಗಿಯೋ, ಕಾಲೇಜು ಪ್ರವೇಶಕ್ಕಾಗಿಯೋ, ವೃತ್ತಿಪರ ಕೋರ್ಸ್‌ಗಳ ಆಯ್ಕೆಗಾಗಿಯೋ ನಡೆಯುವ ಪ್ರತಿ ಪರೀಕ್ಷೆಯಲ್ಲೂ, ಭಿನ್ನ – ಭಿನ್ನವಾಗಿ, ಊಹಿಸಲೂ ಸಾಧ್ಯವಾಗದ ರೀತಿಯಲ್ಲಿ, ಕಲ್ಪಿಸಲು ಅಸಾಧ್ಯವಾದ ರೂಪದಲ್ಲಿ, ದೊಡ್ಡ ಮಟ್ಟದ ಅಧಿಕಾರಿಗಳು, ರಾಜಕಾರಣಿಗಳು, ಅದರ ಫಲಾನುಭವಿಗಳು ಎಲ್ಲರೂ ಸೇರಿ ಬೇರೆ ಬೇರೆ ರೀತಿ ವಂಚಿಸುತ್ತಿದ್ದಾರೆ..



ಅಧಿಕೃತ ಮಾಹಿತಿಯ ಪ್ರಕಾರ ಕಳೆದು ಎಂಟು ವರ್ಷಗಳಲ್ಲಿ ಇಡೀ ದೇಶದಲ್ಲಿ 50 ಕ್ಕೂ ಹೆಚ್ಚು ಪರೀಕ್ಷೆಗಳು ರದ್ದಾಗಿವೆ ಅಥವಾ ಮುಂದೂಡಲ್ಪಟ್ಟಿವೆ ಮತ್ತು ಪುನಃ ಪರೀಕ್ಷೆ ನಡೆಸಲಾಗಿದೆ. ಅಂದರೆ ಬಹಳ ಹಿಂದೆ ಅಪರೂಪವಾಗುತ್ತಿದ್ದ ಪರೀಕ್ಷಾ ಅಕ್ರಮಗಳು ಇದೀಗ ಸಹಜವಾಗುತ್ತಿದೆ. ಇದು ಕೇವಲ ಅಧಿಕೃತ ಅಂಕಿ ಅಂಶಗಳು ಮಾತ್ರ. ನಮ್ಮ ಅನುಭವದ ಪ್ರಕಾರ ಹೇಳುವುದಾದರೆ ಅನಧಿಕೃತವಾಗಿ ಇದಕ್ಕಿಂತ ಹತ್ತುಪಟ್ಟು ಅವ್ಯವಹಾರಗಳು ಕಣ್ಣಿಗೆ ಕಾಣದಂತೆ ವ್ಯಾಪಕವಾಗಿ ನಡೆಯುತ್ತಿದೆ..

ಅಂದರೆ ನಮ್ಮ ವ್ಯವಸ್ಥೆಯ ನಿಜವಾದ ಆದ–ಾರ ಸ್ಥಂಭಗಳ ಆಯ್ಕೆಯೇ ಈ ರೀತಿ ಮೂಲದಲ್ಲಿಯೇ ಭ್ರಷ್ಟ ಗೊಂಡಿರುವಾಗ ಇನ್ನು ಆಡಳಿತಾತ್ಮಕ, ರಾಜಕೀಯ ಸುಧಾರಣೆಯ ಮಾತುಗಳಿಗೆ ಯಾವ ಅರ್ಥವಿದೆ. ಶ್ರಮಪಟ್ಟು ಕೆಲಸ ಮಾಡುವ ವ್ಯಕ್ತಿಗಳಿಗೆ ಒಂದು ವ್ಯವಸ್ಥೆಯಲ್ಲಿ ಸರಿಯಾದ ಸ್ಥಾನ ಮಾನ, ಸಾಮಾಜಿಕ ನ್ಯಾಯ,– ಶ್ರಮಕ್ಕೆ ತಕ್ಕ ಪ್ರತಿಫಲ ಸಿಗದಿದ್ದರೆ ಆ ಇಡೀ ವ್ಯವಸ್ಥೆ ನಿಧಾನವಾಗಿ ಕುಸಿಯ ತೊಡಗುತ್ತದೆ. ಈಗ ಆಗಿರುವುದು ಅದೇ..

ದೊಡ್ಡ ಮಟ್ಟದ ಅಧಿಕಾರಿಗಳೇ ಆಗಿರಲಿ, ಡಾಕ್ಟರ್, ಇಂಜಿನಿಯರ್, ವಿಜ್ಞಾನಿಗಳಂತ ದೊಡ್ಡ ವೃತ್ತಿಪರರೇ ಆಗಿರಲಿ ಎಲ್ಲರೂ ಸಹ ಈ ರೀತಿಯ ಭ್ರಷ್ಟ ವ್ಯವಸ್ತೆಯಲ್ಲಿ ರೂಪಗೊಂಡಿದ್ದೇಯಾದರೆ ಮಕ್ಕಳ ಮುಂದಿನ ಭವಿಷ್ಯವೇನು. ಇದಕ್ಕೆ ಮತ್ತೊಂದು ಕಂಠಕಪ್ರಾಯವಾಗಿ ಸೃಷ್ಟಿಯಾಗಿರುವುದು ಕೋಚಿಂಗ್ ಸೆಂಟರ್ ಗಳೆಂಬ ಅಕಾಡೆಮಿಗಳು. ಇವು ಒಂದು ತರಬೇತಿಯ ಕೇಂದ್ರವಾಗಿ ಮಾತ್ರ ಉಳಿದಿಲ್ಲ. ಮಕ್ಕಳನ್ನು ಅಂಕಗಳಿಗೆ ಸಿದ್ಧತೆಗೊಳಿಸುವ ಕಾರ್ಖಾನೆಗಳಾಗಿ ಮಾರ್ಪಟ್ಟಿವೆ..




ರಾಜಸ್ಥಾನದ ಕೋಟಾದ ಈ ರೀತಿಯ ತರಬೇತಿ ಕೇಂದ್ರಗಳಲ್ಲಿ ನಡೆಯುತ್ತಿರುವ ಆತ್ಮಹತ್ಯೆಗಳು ಇದಕ್ಕೆ ಒಂದು ಜೀವಂತ ನಿದರ್ಶನ. ಏನನ್ನೂ ಸಾಧಿಸದೆ ಎಲ್ಲವನ್ನು ಸಾಧಿಸಿದಂತೆ ಮಾತನಾಡುತ್ತಿರುವ ಈ ಸಂದರ್ಭದಲ್ಲಿ ಇಡೀ ದೇಶ ಮೌಲ್ಯಗಳ ಕು–ರಿತು ಚಿಂತಿಸಬೇಕಾಗುತ್ತದೆ. ಮೌಲ್ಯಗಳನ್ನು ಹೊರತುಪಡಿಸಿದ ಯಾವುದೂ ಅಭಿವೃದ್ಧಿಯಾಗಲು ಸಾಧ್ಯವಿಲ್ಲ. ಎಷ್ಟೇ ಸಮಿತಿಗಳನ್ನು ರಚಿಸಿ, ಯಾರು ಎಷ್ಟೇ ವರದಿಗಳನ್ನು ಕೊಟ್ಟರು ಸಮಾಜದಲ್ಲಿ ಕುಸಿಯುತ್ತಿರುವ ನೈತಿಕ ಮೌಲ್ಯಗಳು ಮತ್ತು ಹೆಚ್ಚಾಗುತ್ತಿರುವ ಹಣ, ಅಧಿಕಾರ ಕೇಂದ್ರೀಕೃತ ಮಾನವನ ವಿಕೃತ ಸ್ವಭಾವಗಳು, ಅನಿವಾರ್ಯತೆಗಳು ಅಕ್ರಮಗಳನ್ನು ಹೆಚ್ಚು ಹೆಚ್ಚು ಮಾಡುತ್ತಿದೆ..



ಕಾನೂನುಗಳು ಚಾಪೆಯಂತೆ ಇದ್ದರೆ ಈ ಭ್ರಷ್ಟ ಅಪರಾಧಿಗಳು ರಂಗೋಲಿ ಕೆಳಗೆ ನುಗ್ಗುವ ಕೆಲಸ ಮಾಡುತ್ತಿದ್ದಾರೆ. ದೇಶದಾದ್ಯಂತ ಅನೇಕ ವಿದ್ಯಾರ್ಥಿಗಳು ಮತ್ತು ಪೋಷಕರು ದೊಡ್ಡಮಟ್ಟದ ಪ್ರತಿಭಟನೆ ನಡೆಸುವಾಗ ನಿಜಕ್ಕೂ ಮನಸ್ಸು ವಿಹ್ವಲ ಗೊಂಡಿದೆ. ಇನ್ನೂ ಈ ವ್ಯವಸ್ಥೆಯನ್ನು ಸರಿಯಾಗಿ ಅರ್ಥಮಾಡಿಕೊಳ್ಳದ ಎಳೆ ವಯಸ್ಸಿನ ವಿದ್ಯಾರ್ಥಿಗಳು, ನ್ಯಾಯಕ್ಕಾಗಿ ಪ್ರತಿಭಟಿಸುವ ದುಸ್ಥಿತಿ ಮತ್ತು ತಾವೇ ಅದರ ಒಂದು ಭಾಗವಾಗುವ ವಿಚಿತ್ರ ಪರಿಸ್ಥಿತಿ ನಮ್ಮಲ್ಲಿದೆ..



ಮೊದಲೇ ಹೇಳಿದಂತೆ ಇದಕ್ಕೆ ದಿಢೀರನೆ ಎಷ್ಟೇ ಕಠಿಣ ಕಾನೂನುಗಳನ್ನು ಜಾರಿಗೆ ತಂದರೂ ಸಮಸ್ಯೆ ಅಷ್ಟು ಸುಲಭವಾಗಿ ಪರಿಹಾರವಾಗುವುದಿಲ್ಲ. ಅಕ್ರಮಗಳ ರೂಪ ಬೇರೆಯಾಗಬಹುದು, ಆದರೆ ಬೇರೆ ಒಳದಾರಿಗಳ ಮುಖಾಂತರ ಅವರು ನುಸುಳುತ್ತಲೇ ಇರುತ್ತಾರೆ. ಆದ್ದರಿಂದ ಸಮಾಜದಲ್ಲಿ ನೈತಿಕ ಮೌಲ್ಯಗಳ ಪುನರ್ ಸ್ಥಾಪನೆ ಒಂದೇ ಇದಕ್ಕಿರುವ ಏಕೈಕ ಪರ್ಯಾಯ ಮಾರ್ಗ.

ಕೆಟ್ಟ ಹಣ, ಕೆಟ್ಟ ಅಧಿಕಾರ, ಕೆಟ್ಟ ಮಾರ್ಗಗಳನ್ನು ಕನಿಷ್ಠ ಯುವ ಜನತೆಯಾದರೂ ತಿರಸ್ಕ–ರಿಸುವಂತಹ ಮನೋಭಾವವನ್ನು ಸೃಷ್ಟಿಸಬೇಕಿದೆ..

ಇದು ಕಷ್ಟವಾದರೂ ಅಸಾಧ್ಯವಲ್ಲ. ಮಕ್ಕಳು ಬಿಳಿಯ ಹಾಳೆ ಇದ್ದಂತೆ. ಅದರ ಮೇಲೆ ಅತ್ಯುತ್ತಮ ಆದರ್ಶಗಳನ್ನು ಮೂಡಿಸುವ ಕೆಲಸ ಹಿರಿಯರದು. ಆ ನಿಟ್ಟಿನಲ್ಲಿ ಪ್ರಯತ್ನಗಳಾಗಲಿ, ಮಾನವೀಯ ಮೌಲ್ಯಗಳ ಶಿಕ್ಷಣ–ಕ್ಕೆ ಅಡಿಪಾಯ ಈಗಿನಿಂದಲೇ ಪ್ರಾರಂಭವಾಗಲಿ ಎಂದು ಮನವಿ ಮಾಡಿಕೊಳ್ಳುತ್ತಾ..

# ಜೂ.26ರಂದು ಶಿಕ್ಷಕರ ಅರ್ಹತಾ ಪರೀಕ್ಷೆ: ವ್ಯವಸ್ಥಿತ ನಿರ್ವಹಣೆಗೆ ಜಿಲ್ಲಾಧಿಕಾರಿ ಸೂಚನೆ



ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯು ಇದೇ 26 ರಂದು ಜರುಗಲಿದ್ದು ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಿರುವ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಟ್ಟು ನಿಟ್ಟಿನ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ. ಬೂಬಾಲನ್ ಹೇಳಿದರು.

ಬುಧವಾರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕರ್ನಾಟಕ ಶಿಕ್ಷಕರ ಅರ್ಹತಾ ಪರೀಕ್ಷೆಯ ಪೂರ್ವಭಾವಿ ಸಭೆಯ ಅಧಕ್ಷತೆ ವಹಿಸಿ ಮಾತನಾಡಿದ ಅವರು, ನಗರದಲ್ಲಿ ಒಟ್ಟು 43 ಕೇಂದ್ರಗಳಲ್ಲಿ ಎರಡು ಅವಧಿಗಳಲ್ಲಿ ಪರೀಕ್ಷೆಗಳು ನಡೆಯಲಿವೆ. 11787 ಅಭ್ಯರ್ಥಿಗಳು ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದಾರೆ. ಬೆಳಿಗ್ಗೆ 9–30ಕ್ಕೆ ಮೊದಲನೆ ಅವಧಿಯ ಪರೀಕ್ಷೆಗಳು ನಡೆಯಲಿದ್ದು ಅಭ್ಯರ್ಥಿಗಳು 9ಗಂಟೆಗೆ ಬಂದು ವರದಿ ಮಾಡಿಕೊಳ್ಳಬೇಕು ಎರಡನೇ ಅವಧಿಯ ಪರೀಕ್ಷೆ ಮಧ್ಯಾಹ್ನ 2ಗಂಟೆಗೆ ಆರಂಭವಾಗಲಿದ್ದು, 1–30ಕ್ಕೆ ವರದಿ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಪರೀಕ್ಷೆಯ ಎಲ್ಲ ಕೊಠಡಿಗಳಿಗೆ ಸಿ.ಸಿ ಕ್ಯಾಮರಾಗಳನ್ನು ಅಳವಡಿಸುವುದು, ಪರೀಕ್ಷಾ ದಿನದಂದು ಪ್ರತಿ ಕೊಠಡಿಗಳಲ್ಲಿ ಛಾಯಾಗ್ರಾಹಕರನ್ನು ನೇಮಿಸಬೇಕು, ಪರೀಕ್ಷೆ ಬರೆಯುವ ಅಭ್ಯರ್ಥಿಗಳು ಮುಖ್ಯದ್ವಾರದೊಳಗೆ ಬರುವಾಗ ಮೊಬೈಲ್‌ಫೋನ್, ಸ್ಮಾರ್ಟ್ಫೋನ, ಬ್ಯಾಗ್ ಹಾಗೂ ಇತರೇ ವಸ್ತುಗಳನ್ನು ಒಳಗಡೆ ತೆಗೆದುಕೊಂಡು ಅವಕಾಶ ವಿರುವುದಿಲ್ಲ, ಅಭ್ಯರ್ಥಿಯು ಒಳಗಡೆ ಹೋದ ನಂತರ ಮತ್ತೊಮ್ಮೆ ಪರೀಕ್ಷಿಸಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರು, ಗಾಳಿ, ಬೆಳಕು ಸಮರ್ಪಕವಾಗಿ ಇರುವಂತೆ ನೋಡಿಕೊಳ್ಳಬೇಕು, ಪರೀಕ್ಷೆಗೆ ನಿಯೋಜಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಬಹಳ ಸೂಕ್ಷ್ಮವಾಗಿ ಕರ್ತವ್ಯ ನಿರ್ವಹಿಸಬೇಕು ಯಾವುದೇ ತಪ್ಪುಗಳಾಗದಂತೆ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಬೇಕು ಕರ್ತವ್ಯದಲ್ಲಿ ನಿರ್ಲಕ್ಷ ವಹಿಸಿದಲ್ಲಿ ಕೊಠಡಿಯ ಮೇಲ್ವಿಚಾರಕನ್ನು ಹೊಣೆಗಾರರನ್ನಾಗಿ ಮಾಡಲಾಗುವುದು. ಕರ್ತವ್ಯ ನಿರ್ವಹಿಸುವವರಿಗೆ ಕಡ್ಡಾಯವಾಗಿ ಗುರುತಿನ ಚೀಟಿಗಳನ್ನು ಧರಿಸಿಬೇಕು ಅವರನ್ನು ಹೊರತು ಪಡಿಸಿ ಯಾವುದೇ ವ್ಯಕ್ತಿಗಳಿಗೆ ಅವಕಾಶ ನೀಡದಂತೆ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಣಾಧಿಕಾ–ರಿಗಳಾದ ರಿಷಿ ಆನಂದ ಮಾತನಾಡಿ, ನಿಯಮಗಳನ್ನು ಪಾಲಿಸಿಕೊಂಡು ಜವಾಬ್ದಾ–ರಿಯುತವಾಗಿ ಕರ್ತವ್ಯಗಳನ್ನು ನಿರ್ವಹಿಸಬೇಕು ಪರೀಕ್ಷೆಗಳು ಅಚ್ಚು ಕಟ್ಟಾಗಿ ನಡೆಯುವಂತೆ ತಾವೆಲ್ಲರೂ ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಶಂಕರ ಮಾರಿಹಾಳ ಮಾತನಾಡಿ ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಲೂ 144 ಕಲಂ ಜಾರಿ ಮಾಡಲಾಗಿದೆ ಅದರ ಜೊತೆಗೆ ಎಲ್ಲ ಕೇಂದ್ರಗಳಿಗೆ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗುವುದು ಹೆಚ್ಚುವರಿ ಸಿಬ್ಬಂದಿ ಅವಶ್ಯವಿದ್ದಲ್ಲಿ ಸೂಕ್ತ ವ್ಯವಸ್ಥೆ ಮಾಡಲಾಗುವುದು. ಯಾವುದೇ ತೊಂದರೆಗಳಿದ್ದಲ್ಲಿ ತಮ್ಮನ್ನು ಸಂಪರ್ಕಿಸುವಂತೆ ಅವರು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹದೇವ ಮುರಗಿ, ಖಜಾನೆ ಉಪ ನಿರ್ದೇಶಕರಾದ ಹನಮಂತ ಕಾಲತಿಪ್ಪಿ, ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳು, ಬಿ.ಇ.ಒಗಳು, ಪ್ರಾಚಾರ್ಯರು ಹಾಗೂ ಇತರರು ಉಪಸ್ಥಿತರಿದ್ದರು.

# ಜೂ.28ರಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ :ಡಬ್ಬಿ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಕುರಿತಂತೆ ಕಾಂಗ್ರೆಸ್ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ಕೈಗೊಳ್ಳಲಾಗುತ್ತಿದೆ ಎಂದು ರಾಜ್ಯ ಒಬಿಸಿ ಮೋರ್ಚಾ ಉಪಾಧ್ಯಕ್ಷ ವಿವೇಕಾನಂದ ಡಬ್ಬಿ ಹೇಳಿದರು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಇತ್ತೀಚಿಗೆ ಜರುಗಿದ ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರ ಎಸ್.ಸಿ.ಎಸ್.ಟಿ ಅಭಿವೃದ್ಧಿ ವಿಷಯದಲ್ಲಿ ಸಾಕಷ್ಟು ಸತ್ಯಗಳನ್ನು ಮರೆಮಾಚಿ ದ್ರೋಹ ಎಸುಗುವ ಕಾರ್ಯ ಮಾಡಿದೆ. ಇದಕ್ಕೆ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ಹಣ ಲೂಟಿ ಮಾಡಿದ ಪ್ರಕರಣವೇ ಸಾಕ್ಷಿಯಾಗಿದೆ. ಇವುಗಳನ್ನು ವಿರೋಧಿಸಿ ಜಿಲ್ಲಾ ಎಸ್.ಟಿ.ಮೋರ್ಚಾದಿಂದ ದಿ:28 ರಂದು ಶುಕ್ರವಾರ ವಿಜಯಪುರದ ಸಿದ್ಧೇಶ್ವರ ದೇವಸ್ಥಾನದಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ಆದ್ದರಿಂದ ಎಲ್ಲ ಬಿಜೆಪಿ ಎಸ್.ಟಿ.ಮೋರ್ಚಾ ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಲು ಕರೆ ನೀಡಿದರು.

ಮಂಡಲ ಅಧ್ಯಕ್ಷ ಅವ್ವಣ್ಣ ಗ್ವಾತಗಿ, ಅನೀಲ ಜಮಾದಾರ, ರವಿ ವಗ್ಗಿ, ಭರತ ಕೋಳಿ, ಮಾಂತೇಶ ಬೇವೂರ, ಪ್ರಕಾಶ ದೊಡಮನಿ, ಮಹಾಂತೇಶ ಬಿರಾದಾರ, ಶರಣು ದಳವಾಯಿ, ಮಲ್ಲು ಕೋಲಕಾರ, ಭೀಮನಗೌಡ ಲಚ್ಯಾಣ, ಉಮೇಶ ವಾಲೀಕಾರ, ಶಾಂತಪ್ಪ ನಾವದಗಿ, ಯಲ್ಲು ಬಾವೂರ, ಚಿದು ದಳವಾಯಿ, ಮಹಾಂತೇಶ ತಳವಾರ ಮಾಳಪ್ಪ ದಿಡ್ಡಿಮನಿ, ಪ್ರಕಾಶ ತಳವಾರ ಇದ್ದರು.

# ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚನ್ನಮ್ಮ, ಡಾ.ಬಿ.ಆರ್. ಅಂಬೇಡ್ಕರ್, ಶ್ರೀಮತಿ ಇಂದಿರಾ ಗಾಂಧಿ ವಸತಿ ಶಾಲೆಗಳಲ್ಲಿ 2024-25ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಈ ವಸತಿ ಶಾಲೆಗಳಲ್ಲಿ ಸಫಾಯಿ ಕರ್ಮಚಾರಿ, ಮ್ಯಾನುವೆಲ್ ಸ್ಕ್ಯಾವೆಂಜರ್, ಚಿಂದಿ ಆಯುವರು, ಸ್ಮಶಾನ ಕಾರ್ಮಿಕರ ಮಕ್ಕಳು,ಬಾಲಕಾರ್ಮಿಕರು, ಜೀತ ವಿಮುಕ್ತ ಕಾರ್ಮಿಕರ ಮಕ್ಕಳು, ಮಾಜಿ ದೇವದಾಸಿಯರ ಮಕ್ಕಳು, ಶೇ.25ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು, ಹೆಚ್‌ಐವಿಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳು, ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮಅತಿ ಸೂಕ್ಷ್ಮ ಸಮುದಾಯದ, ಸೈನಿಕರು ಮತ್ತು ಮಾಜಿ ಸೈನಿಕರು ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಆಶ್ರಯ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳು ಪ್ರವೇಶಕ್ಕೆ ಮೀಸಲಾತಿ ನಿಗದಿಪಡಿಸಲಾಗಿದೆ.

ಪ್ರವೇಶ ಬಯಸುವ ಆಸಕ್ತ ಅರ್ಹ ಅಭ್ಯರ್ಥಿಗಳು https://cetonline.karnataka.gov.in/kreis24d/ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ಮೊರಾರ್ಜಿ ದೇಸಾಯಿ, ಕಿತ್ತೂರ ರಾಣಿ ಚನ್ನಮ್ಮ, ಡಾ.ಬಿ.ಆರ್.ಅಂಬೇಡ್ಕರ್, ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗಳನ್ನು ಸಂಪರ್ಕಿಸುವಂತೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವನಬಾಗೇವಾಡಿ ಉತ್ತರಾದಿ ಮಠಕ್ಕೆ ಸತ್ಯಾತ್ಮತೀರ್ಥರು ಭೇಟಿ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದಲ್ಲಿರುವ ಉತ್ತರಾದಿ ಮಠಕ್ಕೆ ಮಂಗಳವಾರ ರಾತ್ರಿ ಹತ್ತು ಗಂಟೆ ಸುಮಾರಿಗೆ ಉತ್ತರಾದಿ ಮಠಾಧೀಶರಾದ ಪರಮಪೂಜ್ಯ ಶ್ರೀಸತ್ಯಾತ್ಮತೀರ್ಥ ಶ್ರೀಪಾದಂಗಳವರು ಭೇಟಿ ನೀಡಿದರು.



ಶ್ರೀಮಠದ ಅಧ್ಯಕ್ಷ ವಸಂತಾಚಾರ್ಯ ಇಂಗಳೇಶ್ವರ ಹಾಗೂ ಅರ್ಚಕ ವಾದಿರಾಜಾಚಾರ್ಯ ಯಜುರ್ವೇದಿ ಅವರು ಜಯಘೋಷಗಳ ಮೂಲಕ ಗೌರವಪೂರ್ವಕವಾಗಿ ಶ್ರೀಗಳನ್ನು ಬರಮಾಡಿಕೊಂಡರು.

ಶ್ರೀಮಠದಲ್ಲಿರುವ ಚತುಷ್ಟ ಯತಿಗಳ ವೃಂದಾವನಕ್ಕೆ ಶ್ರೀಗಳು ಮಂಗಳಾರತಿ ಮಾಡಿ ಕಟ್ಟಡ ಕಾಮಗಾರಿಯನ್ನು ವೀಕ್ಷಿಸಿದರು. ಶ್ರೀಮಠದ ಕಾರ್ಯಚಟುವಟಿಕೆಗಳ ಬಗ್ಗೆ ಕೆಲ ಕಾಲ ಭಕ್ತರೊಂದಿಗೆ ಚರ್ಚಿಸಿದರು. ನಂತರ ಉಪಸ್ಥಿತ ಸದ್ಭಕ್ತರಿಗೆ ಫಲ ಮಂತ್ರಾಕ್ಷತೆಯನ್ನು ನೀಡಿ ಅನುಗ್ರಹಿಸಿದರು.

ಈ ಸಂದರ್ಭದಲ್ಲಿ ಪೂಜ್ಯ ನರಹರಿಆಚಾರ್ಯ ಜೋಶಿ, ಕಾರ್ಯದರ್ಶಿ ವಸಂತರಾವ ಕುಲಕರ್ಣಿ, ಹಿರಿಯರಾದ ರಾಮಾಚಾರ್ಯ ಜೋಶಿ, ವಿಠ್ಠಲರಾವ ಕುಲಕರ್ಣಿ, ಪ್ರಲ್ಹಾದರಾವ ಕುಲಕರ್ಣಿ, ಜಯತೀರ್ಥಾಚಾರ್ಯ ಇಂಗಳೇಶ್ವರ ,ರಾಮಾಚಾರ್ಯ ಯಜುರ್ವೇದಿ, ಯಲಗೂರೇಶ ಯಜುರ್ವೇದಿ ,ಪ್ರಲ್ಹಾದ ಕುಲಕರ್ಣಿ, ನಾರಾಯಣ ಕುಲಕರ್ಣಿ, ಜಿ.ವ್ಹಿ. ಕುಲಕರ್ಣಿ, ಅನಂತ ಕುಲಕರ್ಣಿ ಹಾಗೂ ತಾಯಂದಿರು ಇದ್ದರು.ಬಸವನಬಾಗೇವಾಡಿ: ಪಟ್ಟಣದಲ್ಲಿರುವ ಉತ್ತರಾದಿ ಮಠಕ್ಕೆ ಮಂಗಳವಾರ ರಾತ್ರಿ ಹತ್ತು ಗಂಟೆ ಸುಮಾರಿಗೆ ಉತ್ತರಾದಿ

ಮಠಾಧೀಶರಾದ ಪರಮಪೂಜ್ಯ ಶ್ರೀಸತ್ಯಾತ್ಮತೀರ್ಥ ಶ್ರೀಪಾದಂಗಳವರು ಭೇಟಿ ನೀಡಿದರು.

ಶ್ರೀಮಠದ ಅಧ್ಯಕ್ಷ ವಸಂತಾಚಾರ್ಯ ಇಂಗಳೇಶ್ವರ ಹಾಗೂ ಅರ್ಚಕ ವಾದಿರಾಜಾಚಾರ್ಯ ಯಜುರ್ವೇದಿ ಅವರು ಜಯಘೋಷಗಳ ಮೂಲಕ ಗೌರವಪೂರ್ವಕವಾಗಿ ಶ್ರೀಗಳನ್ನು ಬರಮಾಡಿಕೊಂಡರು.

ಶ್ರೀಮಠದಲ್ಲಿರುವ ಚತುಷ್ಟ ಯತಿಗಳ ವೃಂದಾವನಕ್ಕೆ ಶ್ರೀಗಳು ಮಂಗಳಾರತಿ ಮಾಡಿ ಕಟ್ಟಡ ಕಾಮಗಾರಿಯನ್ನು ವೀಕ್ಷಿಸಿದರು. ಶ್ರೀಮಠದ ಕಾರ್ಯಚಟುವಟಿಕೆಗಳ ಬಗ್ಗೆ ಕೆಲ ಕಾಲ ಭಕ್ತರೊಂದಿಗೆ ಚರ್ಚಿಸಿದರು. ನಂತರ ಉಪಸ್ಥಿತ ಸದ್ಭಕ್ತರಿಗೆ ಫಲ ಮಂತ್ರಾಕ್ಷತೆಯನ್ನು ನೀಡಿ ಅನುಗ್ರಹಿಸಿದರು.

ಈ ಸಂದರ್ಭದಲ್ಲಿ ಪೂಜ್ಯ ನರಹರಿಆಚಾರ್ಯ ಜೋಶಿ, ಕಾರ್ಯದರ್ಶಿ ವಸಂತರಾವ ಕುಲಕರ್ಣಿ, ಹಿರಿಯರಾದ ರಾಮಾಚಾರ್ಯ ಜೋಶಿ, ವಿಠ್ಠಲರಾವ ಕುಲಕರ್ಣಿ, ಪ್ರಲ್ಹಾದರಾವ ಕುಲಕರ್ಣಿ, ಜಯತೀರ್ಥಾಚಾರ್ಯ ಇಂಗಳೇಶ್ವರ ,ರಾಮಾಚಾರ್ಯ ಯಜುರ್ವೇದಿ, ಯಲಗೂರೇಶ ಯಜುರ್ವೇದಿ ,ಪ್ರಲ್ಹಾದ ಕುಲಕರ್ಣಿ, ನಾರಾಯಣ ಕುಲಕರ್ಣಿ, ಜಿ.ವ್ಹಿ. ಕುಲಕರ್ಣಿ, ಅನಂತ ಕುಲಕರ್ಣಿ ಹಾಗೂ ತಾಯಂದಿರು ಇದ್ದರು.

## ಪಿಎಂ ಆವಾಸ ಯೋಜನೆಯಡಿ ಲಿಂಗತ್ವ ಅಲ್ಪಸಂಖ್ಯಾತರಿಂದ ಅರ್ಜಿ ಕರೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಮಹಾನಗರ ಪಾಲಿಕೆ ವ್ಯಾಪ್ತಿಯ ವಸತಿ ರಹಿತ ಲಿಂಗತ್ವ ಅಲ್ಪಸಂಖ್ಯಾತರಿಗೆ ಪ್ರಧಾನಮಂತ್ರಿ ಆವಾಸ ವಿಶೇಷ ಯೋಜನೆಯಡಿ 50 ಮನೆಗಳ ಗುರಿ ನಿಗದಿಪಡಿಸಿದ್ದು, ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯ ನಿರ್ಗತಿಕ ವಸತಿ ರಹಿತ ಲಿಂಗತ್ವ ಅಲ್ಪಸಂಖ್ಯಾತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಅರ್ಜಿ ಸಲ್ಲಿಸುವ ಆಸಕ್ತ ಅರ್ಹರು ಅರ್ಜಿ ಮತ್ತು ಅರ್ಜಿದಾರ ಭಾವಚಿತ್ರ, ಜಿಲ್ಲಾಧಿಕಾರಿಗಳಿಂದ ಪಡೆದಿರುವ ಲಿಂಗತ್ವ ಅಲ್ಪಸಂಖ್ಯಾತ ಗುರುತಿನ ಚೀಟಿ, ಪಡಿತರ ಚೀಟಿ, ಆಧಾರ ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಚುನಾವಣಾ ಗುರುತಿನ ಚೀಟಿ ಹಾಗೂ ಬ್ಯಾಂಕ್ ಪಾಸ್ ಬುಕ್‌ದೊಂದಿಗೆ ದಿನಾಂಕ : 26-07-2024ರೊಳಗೆ ಅರ್ಜಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವಿಜಯಪುರ ಕಚೇರಿಗೆ ಸಲ್ಲಿಸಬೇಕು.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಜಯಪುರ ದೂ: 08352-295353 ಸಂಖ್ಯೆಗೆ ಸಂಪರ್ಕಿಸುವಂತೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಂಪೇಗೌಡ ಜಯಂತಿ ಆಚರಣೆಯ ಪೂರ್ವಭಾವಿ ಸಭೆ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಬೆಂಗಳೂರು ನಗರ ನಿರ್ಮಾತೃ ನಾಡಪ್ರಭು ಕೆಂಪೇಗೌಡ ಅವರ 515ನೇ ಜಯಂತಿಯನ್ನು ಜೂ. 27 ರಂದು ಬೆಳಗ್ಗೆ 10 ಗಂಟೆಗೆ ಎಲ್ಲ ಇಲಾಖೆಯ ಅಧಿಕಾರಿಗಳು ತಮ್ಮ ತಮ್ಮ ಇಲಾಖೆಯಲ್ಲಿ ಆಚರಿಸಿದ ನಂತರ ಬಸವನಬಾಗೇವಾಡಿಯ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ತಾಲೂಕಾಡಳಿತ ಹಮ್ಮಿಕೊಂಡಿರುವ ನಾಡಪ್ರಭು ಕೆಂಪೇಗೌಡ ಅವರ 515 ನೇ ಜಯಂತೋತ್ಸವ ಕಾರ್ಯಕ್ರಮಕ್ಕೆ ಹಾಜರಾಗಬೇಕೆಂದು ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಹೇಳಿದರು.

ಪಟ್ಟಣದ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿಯಂಗವಾಗಿ ಬುಧವಾರ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಮ್ಮ ತಹಸೀಲ್ದಾರ ಕಚೇರಿಯಲ್ಲಿಯೂ ಮೊದಲು ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ ಮಾಡಲಾಗುವುದು. ನಂತರ ತಾಲೂಕಾಡಳಿದಿಂದ ಸ್ಥಳೀಯ ಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿರುವ ನಾಡಪ್ರಭು ಕೆಂಪೇಗೌಡ ಜಯಂತೋತ್ಸವ ಕಾರ್ಯಕ್ರಮಕ್ಕೆ ತೆರಳುವದು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜವಳಿ, ಕಬ್ಬು, ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ವಹಿಸುವರು. ಜಿಲ್ಲಾ ಉಸ್ತುವಾರಿ ಸಚಿವ, ಬೃಹತ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ ಘನಉಪಸ್ಥಿತಿ ವಹಿಸುವರು. ಮುಖ್ಯಅತಿಥಿಗಳಾಗಿ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ, ವಿಧಾನಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಸಂಸದರಾದ ರಮೇಶ ಜಿಗಜಿಣಗಿ, ಸುಧಾ ಮೂರ್ತಿ, ವಿಧಾನ ಪರಿಷತ್ ಸದಸ್ಯರಾದ ಪ್ರಕಾಶ ರಾಠೋಡ, ಸುನೀಲಗೌಡ ಪಾಟೀಲ, ಪಿ.ಎಚ್.ಪೂಜಾರ, ಶಾಸಕ ಭೀಮನಗೌಡ(ರಾಜುಗೌಡ) ಪಾಟೀಲ ಆಗಮಿಸುವರು. ಸ್ಥಳೀಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅಧ್ಯಾಪಕಿ ವಿಜಯಲಕ್ಷ್ಮೀ ಉಪನ್ಯಾಸ ನೀಡುವರು ಎಂದರು.

ಸರ್ಕಾರದ ನಿರ್ದೇಶನದಂತೆ ನಾಡಪ್ರಭು ಕೆಂಪೇಗೌಡ ಜಯಂತಿಯಂಗವಾಗಿ ಈಗಾಗಲೇ ತಾಲೂಕಿನಲ್ಲಿರುವ 46 ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ನಾಡಪ್ರಭು ಕೆಂಪೇಗೌಡ ಅವರ ಕುರಿತು ಭಾಷಣ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ. ಈ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಜಯಂತೋತ್ಸವ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಲಾಗುವುದು ಎಂದರು.

ಸಭೆಯಲ್ಲಿ ಕ್ಷೇತ್ರಶಿಕ್ಷಣಾಧಿಕಾರಿ ವಸಂತ ರಾಠೋಡ, ಸಹಾಯಕ ಕೃಷಿ ನಿರ್ದೇಶಕ ಎಂ.ಎಚ್.ಯರಝರಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಭವಾನಿ ಪಾಟೀಲ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಸಿ.ಜಿ.ಬಿರಾದಾರ, ಉಪಖಜಾನೆ ಅಧಿಕಾರಿ ಮನೋಜಕುಮಾರ ಪಾಟೀಲ, ಆರೋಗ್ಯ ಇಲಾಖೆಯ ಎಸ್.ಎಸ್.ಮೇಟಿ, ತಾಲೂಕು ಪಂಚಾಯಿತಿಯ ಶಶಿಧರ ಪಾಟೀಲ, ಶಿಕ್ಷಣ ಇಲಾಖೆಯ ಎ.ಎಸ್.ಗುಬ್ಬಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಮುಖಂಡರು ಭಾಗವಹಿಸಿದ್ದರು.

# ಸಂವಹನ ಕಲೆಯೇ ಭದ್ರ ಭವಿಷ್ಯಕ್ಕೆ ಕೀಲಿ ಕೈ

**ಉದಯರಶ್ಮಿ ದಿನಪತ್ರಿಕೆ**



ಜ ಯ್ ನು ಡಿ

● ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ
9449234142

ಯಾರೊಂದಿಗೆ ಹೇಗೆ ಮಾತನಾಡಬೇಕು ಅಂತ ತಿಳಿಯದೇ ಎಷ್ಟೋ ಸಲ ಅಪಾರ್ಥಗಳು ಸೃಷ್ಟಿಯಾಗಿ ಬಿಡುತ್ತವೆ. ಮಾತನಾಡಿದರೆ ರಗಳೆ ಅಂತ ಮಾತನಾಡಲೇಬೇಕಾದ ಸಂದರ್ಭ ಬಂದಾಗಲೂ ಮೌನ ವಹಿಸುತ್ತೇನೆ. ಆಗಲೂ ಬೈಸಿಕೊಳ್ಳುತ್ತೇನೆ ಮಾತನಾಡದೇ ಇದ್ದುದಕ್ಕೆ. ಬಾಯಿ ಬಿಟ್ಟರೂ ತೊಂದರೆ ಮುಚ್ಚಿಕೊಂಡಿದ್ದರೂ ತೊಂದರೆ ಯಾವಾಗ, ಎಲ್ಲಿ, ಎಷ್ಟು, ಹೇಗೆ ಮಾತನಾಡುವುದು ತಿಳಿಯದೇ ತಲೆ ಗಿರಗಿಟ್ಲೆ ಆಡಿಸುತ್ತದೆ. ಅಪರಿಚಿತರನ್ನು ಕಂಡಾಗಲಂತೂ ಮೈ ಮೇಲೆ ಮುಳ್ಳು ಬಿದ್ದವರ ತರ ಆಡ್ತಿನಿ. ಗೆಳೆಯರೊಂದಿಗೆ ಕೊಂಚ ಸಲುಗೆಯಿಂದ ಮಾತನಾಡಿದರೆ ನಿನ್ನ ಮಾತು ಮನಸ್ಸಿಗೆ ನೋವು ತಂತು ಅಂತಾರೆ. ಮೌನ ವಹಿಸಿದರೆ ಆತ್ಮೀಯತೆಯೇ ಇಲ್ಲ ಅಂತ ಬೈತಾರೆ. ಅಬ್ಬಬ್ಬಾ! ಎಷ್ಟೊಂದು ಕಠಿಣ ಈ ಸಂವಹನ. ನಾವಾಡುವ ಮಾತುಗಳು ಕೇವಲ ನಮ್ಮ ಮನದ ಅಭಿಪ್ರಾಯಗಳನ್ನು ಸೂಚಿಸುತ್ತವೆ ಅಂತ ತಿಳಿದಿದ್ದೆ. ಹಲವು ಬಾರಿ ನಾನು ಬಳಸುವ ಪದಗಳು ನಿಜ ಸಂದೇಶವನ್ನು ತಲುಪಿಸದೇ ತಪ್ಪು ಕಲ್ಪನೆಯನ್ನು ಮೂಡಿಸುತ್ತವೆ. ವಿಸ್ಮಯಕಾರಿ ಪರಿಣಾಮ ಬೀರುತ್ತವೆ. ಅದಕ್ಕೆ ಬಲ್ಲವರು ಹೇಳಿದ್ದು ಸರಿಯಾಗಿಯೇ ಇದೆ. 'ಮಾತು ಬಲ್ಲವನಿಗೆ ಜಗಳವಿಲ್ಲ.' 'ಮಾತು ಕಲಿಯಲು ಮೂರು ವರ್ಷ ಸಾಕು. ಮಾತು ಹೇಗೆ ಆಡುವುದು ಎಂಬುದಕ್ಕೆ ನೂರು ವರ್ಷ ಸಾಲದು.' ಇದು ಹಲವು ಜನರ ಸ್ವಗತ ಮತ್ತು ಗೋಳು.

ಸಂವಹನ ಕಲೆ ಎಂಬುದು..

'ನಮ್ಮ ವಿಚಾರಗಳನ್ನು ಇತರರಿಗೆ ಸ್ಪಷ್ಟವಾಗಿ ಮನದಟ್ಟಾಗುವಂತೆ, ಅರ್ಥೈಸಿಕೊಳ್ಳುವಂತೆ ತಿಳಿಸುವುದೇ ಸಂವಹನ.' ಎರಡು ಮುಖ್ಯ ಅಂಶಗಳಿವೆ. ಒಂದು ಸಂದೇಶ ನೀಡುವುದು. ಮತ್ತೊಂದು ಸ್ವೀಕರಿಸುವುದು. ಉಪಯೋಗಿಸುವ ಶಬ್ದಗಳ ಮೇಲೆ ಅಷ್ಟೇ ಅಲ್ಲ ದಾಟಿಗೂ ಗಮನ ನೀಡಬೇಕು. ನಮ್ಮ ಮಾತು ಅರ್ಥ ನೀಡಿದರೆ ಸಾಲದು. ಅದು ಕೇಳುಗರ ಮನ ತಟ್ಟಬೇಕು. ಇತರರೊಂದಿಗಿನ ಸಂವಹನವನ್ನು ನಾಲ್ಕು ವಿಧವಾಗಿ ವಿಂಗಡಿಸಬಹುದಾಗಿದೆ.



ನಾವೇನು ಮಾತನಾಡುತ್ತೇವೆ. ಹೇಗೆ ಮಾತನಾಡುತ್ತೇವೆ. ಏನು ಮಾಡುತ್ತೇವೆ. ಹೇಗೆ ಕಾಣಿಸಿಕೊಳ್ಳುತ್ತೇವೆ.

ಅರಿವಿನ ಕೊರತೆ

ವೈಯಕ್ತಿಕ ಬದುಕನ್ನು ಚೆನ್ನಾಗಿ ರೂಪಿಸಿಕೊಳ್ಳಲು ಕಲಿಯಲೇಬೇಕಾದ ಈ ಕೌಶಲ್ಯ ವೃದ್ಧಿಗೆ ಶಾಲಾ ಕಾಲೇಜುಗಳ ಪಠ್ಯಕ್ರಮದಲ್ಲಿ ಬೋಧನಾ ಶೈಲಿಯಲ್ಲಿ ಸೂಕ್ತ ಪ್ರಾತಿನಿಧ್ಯತೆ ನೀಡಬೇಕೆಂಬುದು ಹಲವರ ದೀರ್ಘಕಾಲದ ಒತ್ತಾಸೆ. ಸಂವಹನಕ್ಕೆ ಸಂಬಂಧಿಸಿದಂತೆ ತರಬೇತಿ ಮಾರ್ಗದರ್ಶನಗಳು ತುಂಬಾ ಕಡಿಮೆಯಾಗಿರುವುದು ವಿಷಾದಕರ ಸಂಗತಿ. ಮಾಮೂಲಿ ಸಂದರ್ಭಗಳಲ್ಲಿ ಔಪಚಾರಿಕ ಸನ್ನಿವೇಶಗಳಲ್ಲಿ ಸಂವಹನ ನಡೆಸುವುದು ಹೇಗೆ ಎಂಬುದು ಗೊಂದಲಕ್ಕೆ ಕೆಡುವುತ್ತಿದೆ. ಸಾಮಾನ್ಯ ಮಾರ್ಗದರ್ಶನ ಹಾಗೂ ಅರಿವಿನ ಕೊರತೆಯಿಂದಾಗಿ ಈ ಕಲೆ ಕಬ್ಬಿಣದ ಕಡಲೆಯಂತಾಗಿದೆ. ಬಹುತೇಕ ಉದ್ಯೋಗಾಕಾಂಕ್ಷಿಗಳಿಗೆ ತಲೆ ನೋವಾಗಿ ಪರಿಣಮಿಸಿದೆ. ಕೇವಲ ಉದ್ಯೋಗಾರ್ಥಿಗಳಿಗೆ ಮಾತ್ರವಲ್ಲ ದಿನ ನಿತ್ಯದ ಬದುಕಿನಲ್ಲಿ ಇತರರನ್ನು ಮನವೊಲಿಸುವ, ಪ್ರೇರೇಪಿಸುವ, ಒತ್ತಾಯಿಸುವ ಸಂದರ್ಭಗಳು ಸಹಜ. ವ್ಯಾವಹಾರಿಕ ಸಮಸ್ಯೆಗಳು ಉಲ್ಬಣಗೊಂಡಾಗ ಸಂವಹನದ ಪ್ರಾಮುಖ್ಯತೆ ನಮ್ಮ ಅರಿವಿಗೆ ಬಂದೇ ಬರುತ್ತದೆ. ನಾವು ಬಳಸುವ ಪದಗಳು ಇತರರಿಗೆ ಕಿರಿಕಿರಿ ಬೇಸರ ತರಿಸುತ್ತವೆ. ನಕಾರಾತ್ಮಕ ಭಾವ ಮೂಡಿಸುತ್ತವೆ. ವೈಯಕ್ತಿಕ ಸಂಬಂಧಗಳನ್ನು ಹಾಳು ಮಾಡುತ್ತವೆ. ಹೀಗಾಗಿ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಣೆ ಸಾಧ್ಯವಾಗುತ್ತಿಲ್ಲ.

ಅವಕಾಶದ ಬಾಗಿಲು



ನಿಜ, ಸಂವಹನ ಕಲೆ ಕರಗತ ಮಾಡಿಕೊಳ್ಳುವುದು ಅಷ್ಟೊಂದು ಸುಲಭವೇನಲ್ಲ. ಹಾಗಂತ ಕರಗತ ಮಾಡಿಕೊಳ್ಳುವುದು ಅಸಾಧ್ಯವೆಂದೇನಿಲ್ಲ. ಮೊದಲೆಲ್ಲ ಮಾತು ವ್ಯಕ್ತಿತ್ವ ವಿಕಸನದಲ್ಲಿ ಇಷ್ಟೊಂದು ಪಾತ್ರ ವಹಿಸುತ್ತಿರಲಿಲ್ಲ ಎನ್ನುವುದು ಸಾಮಾನ್ಯ ಅಂಬೋಣ. ಆದರೆ ಇಂದಿನ ಸ್ಪರ್ಧಾತ್ಮಕ ಲೋಕದಲ್ಲಿ ಎಲ್ಲೆಲ್ಲೂ ಸಂವಹನ ಕಲೆಗೆ ಮಣೆ ಹಾಕಲಾಗುತ್ತಿದೆ. ಈ ಕಲೆ ಬಲ್ಲವರಿಗೆ ಎಲ್ಲಿಲ್ಲದ ಮನ್ನಣೆ. ಇತ್ತೀಚಿಗಂತೂ ಸಂವಹನ ಕೌಶಲ ಇಲ್ಲದ ಉದ್ಯೋಗಾರ್ಥಿಗಳ ನೇಮಕಾತಿ ದುರ್ಲಭವೆನಿಸುತ್ತಿದೆ. ಸಂವಹನ ಬಲ್ಲವರಿಗೆ ಅವಕಾಶದ ಬಾಗಿಲುಗಳು ತೆರೆಯುತ್ತಿವೆ. ಇದು ಜೀವನದ ಅತ್ಯಮೂಲ್ಯ ಕಲೆಗಳಲ್ಲಿ ಕೌಶಲ್ಯಗಳಲ್ಲಿ ಒಂದಾಗಿ ಗುರುತಿಸಿಕೊಳ್ಳುತ್ತಿದೆ. ಏನೆಲ್ಲ ಪ್ರತಿಭೆ ಇದ್ದರೂ ಇದಿಲ್ಲದಿದ್ದರೆ ಏನೂ ಇಲ್ಲ ಎನ್ನುವ ಪರಿಸ್ಥಿತಿಯೂ ನಿರ್ಮಾಣವಾಗಿದೆ. ಅತ್ಯಾಧುನಿಕ ತಂತ್ರಜ್ಞಾನ ವಿಜ್ಞಾನ ಯುಗದ ಜೀವನ ಶೈಲಿಗೆ ಅತ್ಯವಶ್ಯವಾಗಿ ಕರಗತ ಮಾಡಿಕೊಳ್ಳಲೇಬೇಕಾದ ಕಲೆ ಇದಾಗಿದೆ. ಉತ್ತಮ ಸಂವಹನ ನಮ್ಮ ಬೆಲೆಯನ್ನು ಹೆಚ್ಚಿಸುತ್ತದೆ. ಈ ಕಲೆಯ ಕೊರತೆ ಕೀಳರಿಮೆಯಿಂದ ಬಳಲುವಂತೆ ಮಾಡುತ್ತದೆ. ಭದ್ರ ಭವಿಷ್ಯ ನಿರ್ಮಾಣದ ಕೀಲಿ ಕೈಯಂತಿರುವ ಕಲೆ ಕರಗತ ಮಾಡಿಕೊಳ್ಳಲು ಸಂಭಾಷಣೆ ಸಂವಾದ ಚರ್ಚೆ ಉಪನ್ಯಾಸಗಳಲ್ಲಿ ಭಾಗವಹಿಸುವುದು ಮುಖ್ಯ.

ಪರಿಣಾಮಕಾರಿ ಸಂವಹನ ಕೌಶಲ ಬೆಳೆಸಿಕೊಳ್ಳುವುದು ಹೀಗೆ

ಕೇಳಿಸಿಕೊಳ್ಳದಿರಿ, ಆಲಿಸಿಕೊಳ್ಳಿ

ಅರೆ! ಇದೇನು ಮಾತನಾಡಬೇಕೆಂದರೆ ಕೇಳಿಸಿಕೊಳ್ಳದೇ ಆಲಿಸಬೇಕೆ? ಎಂದು ಹುಬ್ಬೇರಿಸುತ್ತಿರೇನು? ಹೌದು ಮುಂದಿನವರ ಮಾತಿಗೆ ಯಾಂತ್ರಿಕಕವಾಗಿ ಕುಳಿತು ಕಿವಿಗೊಡುವುದು ಕೇಳಿಸಿಕೊಳ್ಳುವಿಕೆ.



ಬದಲಾಗಿ ಮಾನಸಿಕವಾಗಿ ಕಿವಿ ತೆರೆದಿಡಿ. ಅದೇ ಆಲಿಸುವಿಕೆ. ಟೀಕೆಗಳಿಗೆ ಸಮಾಧಾನದಿಂದ ಪ್ರತಿಕ್ರಿಯಿಸಿ.ಸತ್ಯಾಂಶ ತಿಳಿದು ಕ್ರಮ ಕೈಗೊಳ್ಳಿ. ಹಾವಭಾವ ಗಮನಿಸಿ. 'ಮಾತನಾಡುವುದು ಜ್ಞಾನದ ಕ್ಷೇತ್ರ ಆದರೆ, ಅದನ್ನು ಮನಗೊಟ್ಟು ಕೇಳುವುದು ಜಾಣತನದ ಹಕ್ಕು.'ಎಂದಿದ್ದಾನೆ ಅಲಿವರ್ ಹೋಮ್ಸ್..' ನಿಜ, ನೀವು ಹೇಳಿದ್ದು ಸರಿಯಾಗಿದೆ, ಹೌದಾ! ವಿಚಾರಿಸೋಣ, ನೀವು ಹೇಳಿದ್ದನ್ನು ಒಪ್ಪಿಕೊಳ್ತಿನಿ. ಎಂಬ ಪ್ರತಿಕ್ರಿಯೆಗಳಿಂದ ಸ್ಪಂದಿಸಿ.ಆಗ ನಿಮ್ಮಲ್ಲಿನ ಮಾತುಗಾರ ಚುರುಕಾಗುತ್ತಾನೆ. ಜಾಗೃತಗೊಳ್ಳುತ್ತಾನೆ. ಬೆಳೆಯುತ್ತಾನೆ

ದೃಷ್ಟಿ ಸಂಪರ್ಕ

ಮಾತನಾಡುವಾಗ ಪರಸ್ಪರ ದೃಷ್ಟಿ ಸಂಪರ್ಕದಿಂದ ಮಾತನಾಡುವುದು ಮುಖ್ಯ. ಎಲ್ಲೆಲ್ಲೋ ನೋಡುತ್ತ ಇಲ್ಲವೇ ನೆಲದತ್ತ ನೋಡಿ ಮಾತನಾಡುವ ರೂಢಿ ಸರಿಯಲ್ಲ. ಇತರರನ್ನು ನಿಮ್ಮ ಮಾತಿನೆಡೆ ಸೆಳೆಯಬೇಕೆಂದರೆ ನಿಮ್ಮ ನೋಟ ಅತಿ ಮುಖ್ಯ. ಅಚ್ಚುಮೆಚ್ಚಿನ ಗೆಳೆಯರೊಂದಿಗೆ ಹೇಳುವ ವಿಷಯವನ್ನು ಹೇಗೆ ಅರ್ಥ ಮಾಡಿಸುತ್ತಿರಿ ಎಂಬುದು ಗಣನೆಗೆ ಬರುತ್ತದೆ. 'ಮಾತಿನ ಬಡತನವು ಮನಸ್ಸಿನ ದಾರಿದ್ರ್ಯತನದ ದ್ಯೋತಕ' ಎಂದೊಮ್ಮೆ ಬ್ರೂಸ್ ಬರ್ಟನ್ ಹೇಳಿದ್ದು ಅರ್ಥಪೂರ್ಣವಾಗಿದೆ. ಸಂವಹನದಲ್ಲಿ ವ್ಯವಹಾರಿಕ ಜ್ಞಾನ, ಬುದ್ಧಿವಂತಿಕೆ, ಚಾಣಾಕ್ಷತನ, ಗಟ್ಟಿ ಸ್ನೇಹಕ್ಕೆ ಕಾರಣವಾಗುತ್ತದೆ. ನಾಯಕನಾಗಲು ದಾರಿಯಾಗುತ್ತದೆ ವೃತ್ತಿಗೆ ಬೇಕಾದ ಪೂರಕ ಮಾಹಿತಿ ಜೊತೆಗೆ ವಾಕ್ಚಾತುರ್ಯವಿರಲಿ ಸ್ಪಷ್ಟವಾದ ನೇರವಾದ ಮಾತಿರಲಿ. ಅಗತ್ಯತೆ ಇದ್ದರೆ ಪುನರುಚ್ಚಾರವಿರಲಿ. ಮೇಲರಿಮೆ ಕೀಳರಿಮೆ ಇಲ್ಲದೇ ಸ್ಪಂದಿಸಿ.. ಹೀಗಾದಾಗ ಕ್ಯಾಂಪಸ್ ನೇಮಕಾತಿ ಸಂದರ್ಶನಗಳಲ್ಲಿ ಉದ್ಯೋಗ ಸಿಗುವುದು ಖಾತರಿ.

ದೇಹ ಭಾಷೆ



ಆಲೋಚನೆಗಳಿಗೂ ದೇಹ ಭಾಷೆಗೂ ಸಾಮ್ಯತೆಯಿದೆ ದೇಹದ ನಿಲುವು ಆಲೋಚನೆಗಳಿಗೆ ಪೂರಕವಾಗಿರಬೇಕು. ಅಭಿಪ್ರಾಯಗಳನ್ನು ಇತರರ ಮೇಲೆ ಹೇರದೆ ಮನದಟ್ಟು ಮಾಡುವಂಥ ದೇಹ ಭಾಷೆ ಬಳಸಿ. ಇತರರನ್ನು ಅಭಿನಂದಿಸುವಾಗ ಇಲ್ಲವೇ ಬೇರೆ ಭಾವಾಭಿವ್ಯಕ್ತಿ ಸಂದರ್ಭಗಳಲ್ಲಿ ನಿಮ್ಮ ಮುಖದ ಭಾವ,ಹಸ್ತ ಲಾಘವ, ನಿಲುವು, ಶೈಲಿ, ದಾಟಿ, ಚಲನೆ, ಮುಗಳ್ನಗೆ, ಧ್ವನಿ ಎಲ್ಲವೂ ಆಲೋಚನೆಗೆ ತಕ್ಕಂತಿರಬೇಕು. ಆಡುವ ಮಾತಿಗೆ ದೇಹ ಭಾಷೆ ಪೂರಕವಾದಾಗ ಮಾತ್ರ ಸಂವಹನ ಪರಿಣಾಮಕಾರಿ ಆಗುವುದರ ಜೊತೆಗೆ ಎಲ್ಲರೂ ಮೆಚ್ಚುವ ವ್ಯಕ್ತಿತ್ವ ನಿಮ್ಮದಾಗಲು ಸಾಧ್ಯ. ಪ್ರಶ್ನೆ ಕೇಳಲು ಹಿಂಜರಿಯದಿರಿ. ಪ್ರಶ್ನೆ ಕೇಳುವ ದಾಟಿ ಮತ್ತು ಧೋರಣೆ ಗೌರವಪೂರ್ವಕವಾಗಿರಲಿ.

ಅಲ್ಪಾವಧಿ ಕೋರ್ಸ್

ಉತ್ತಮ ಮಾತುಗಾರಿಕೆ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಬಂಡವಾಳವಾಗಿದೆ. ಹೀಗಾಗಿ ಕೆಲವು ಶಿಕ್ಷಣ ಸಂಸ್ಥೆಗಳಲ್ಲಿ ಲಭ್ಯವಿರುವ ಸಂವಹನ ಕೋರ್ಸ್‌ಗಳಿಗೆ ಹಾಜರಾಗಿ. ಪ್ರಾಯೋಗಿಕ ತರಬೇತಿಯನ್ನು ಪಡೆಯಿರಿ. ಪರಿಣಾಮಕಾರಿ ಸಂವಹನದಿಂದ ಕಾರ್ಯಕ್ಷಮತೆ ಹೆಚ್ಚುತ್ತದೆ. ನಿರೀಕ್ಷಿತ ಫಲಿತಾಂಶವೂ ಲಭಿಸುತ್ತದೆ. ಜನ್ಮತಃ ಯಾರೂ ಉತ್ತಮ ವಾಗ್ಮಿಗಳಾಗಿರುವುದಿಲ್ಲ. ನಿರಂತರ ಪ್ರಯತ್ನದಿಂದ ಮಾತ್ರ ಸಂವಹನ ಕೌಶಲ್ಯ ವೃದ್ದಿಸಿಕೊಳ್ಳಬಹುದು. ತನ್ಮೂಲಕ ಭದ್ರ ಭವಿಷ್ಯದ ಕೀಲಿಕೈ ಪಡೆಯಬಹುದು.

# ಮಾದಕ ವಸ್ತುಗಳ ಸಾಗಾಣಿಕೆ & ಮಾರಾಟ ನಿಷೇಧ ಅರಿವು ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ಯುವಜನಾಂಗ ಮಾದಕ ವಸ್ತುಗಳಿಂದ ದೂರವಿರಬೇಕು. ಯಾವುದೇ ಕಾರಣಕ್ಕೂ ಮಾದಕ ವಸ್ತುಗಳನ್ನು ಸಾಗಾಣಿಕೆ ಹಾಗೂ ಮಾರಾಟ ಮಾಡಬಾರದು. ಈ ವಸ್ತುಗಳನ್ನು ಸಾಗಾಣಿಕೆ, ಮಾರಾಟ ಮಾಡುವವರು ಕಂಡುಬಂದರೆ ಅಂತಹವರ ಮೇಲೆ ಪೊಲೀಸ್ ಇಲಾಖೆಯು ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳುತ್ತದೆ ಎಂದು ಸ್ಥಳೀಯ ಪಿಐ ವಿಜಯ ಮುರಗುಂಡಿ ಹೇಳಿದರು.

ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪೊಲೀಸ್ ಇಲಾಖೆ, ಕಾಲೇಜಿನ ಎನ್‌ಎಸ್‌ಎಸ್ ಘಟಕದ ಸಹಯೋಗದಲ್ಲಿ ಮಾದಕ ವಸ್ತುಗಳ ಸಾಗಾಣಿಕೆ ಹಾಗೂ ಮಾರಾಟ ನಿಷೇಧ ಕುರಿತು ಬುಧವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಯುವಜನರು ಕ್ಷಣಿಕ ಸುಖಕ್ಕಾಗಿ ಸೇವಿಸುವ ಮಾದಕ ವಸ್ತುಗಳು ಆರೋಗ್ಯ ಹಾಳು ಮಾಡುವ ಜೊತೆಗೆ ಸಮಾಜದ ಮೇಲೆ ದುಷ್ಪರಿಣಾಮ ಉಂಟು ಮಾಡುತ್ತದೆ. ಆದ್ದರಿಂದ ಯಾರೂ ಕೂಡ ಮಾದಕ ವಸ್ತುಗಳ ಸೇವನೆಯ ಬಲೆಗೆ ಬೀಳಬಾರದು. ಮಾದಕ ವಸ್ತುಗಳ ಸೇವನೆ ಸಾವಿಗೆ ಆಹ್ವಾನ ನೀಡಿದ್ದಂತೆ. ವ್ಯಸನಕ್ಕೆ ಬಲಿಯಾದರೆ ವ್ಯಕ್ತಿ ಹಣ, ಸಮಯ, ಜೀವನವನ್ನೇ ವ್ಯರ್ಥ ಮಾಡಿಕೊಳ್ಳುತ್ತಾನೆ. ನಮಗೆ ದೊರೆತಿರುವ ಜೀವನ ಅಮೂಲ್ಯವಾಗಿದೆ. ಇದನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕಾದ ಅಗತ್ಯವಿದೆ ಎಂದರು.

ಪಿಎಸ್‌ಐ ಎನ್.ಟಿ.ದಡ್ಡಿಮನಿ ಮಾತನಾಡಿ, ಮಾದಕ ವಸ್ತುಗಳ ಸೇವನೆಯಿಂದ ಆರೋಗ್ಯ ಹಾಳಾಗುವ ಜೊತೆಗೆ ಕುಟುಂಬದ ನೆಮ್ಮದಿಯೂ ಹಾಳಾಗುತ್ತದೆ. ಮಾದಕ ವ್ಯಸನಿಗಳು ಮಾನಸಿಕ ಖಿನ್ನತೆಗೆ ಒಳಗಾಗುತ್ತಾರೆ. ಇದರ ಬಗ್ಗೆ ಎಲ್ಲರೂ ಜಾಗೃತರಾಗಬೇಕಿದೆ. ವ್ಯಸನಮುಕ್ತ ಸಮಾಜ ಅವಶ್ಯಕತೆ ನಿರ್ಮಾಣದಲ್ಲಿ ಯುವಜನತೆ ಸೇರಿದಂತೆ ಎಲ್ಲರ ಪಾತ್ರವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಎನ್.ಬಿ.ಹೊಸಮನಿ ಮಾತನಾಡಿ, ಉತ್ತಮ ಹಾಗೂ ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಎಲ್ಲರ ಜವಾಬ್ದಾರಿಯಿದೆ. ಯುವಜನತೆ ಯಾವುದೇ ದುಶ್ಚಟಗಳಿಗೆ ಬಲಿಯಾಗದೇ ನಿರಂತರ ಅಧ್ಯಯನಶೀಲತೆ ಮೈಗೂಡಿಸಿಕೊಂಡು ಉತ್ತಮ ನಾಗರಿಕರಾಗಿ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸಲು ಮುಂದಾಗಬೇಕೆಂದರು.

ಕಾರ್ಯಕ್ರಮದಲ್ಲಿ ಪ್ರಶಾಂತ ಮಮದಾಪುರ, ಡಾ.ಪುತಳಾ ಪಾಟೀಲ, ಶೀಲಾ ರಾಮತೀರ್ಥ, ಶ್ರೀಶೈಲ ಪೂಜಾರಿ ಇತರರು ಇದ್ದರು. ಎನ್‌ಎಸ್‌ಎಸ್ ಸಂಯೋಜಕ ಡಾ.ಎಚ್.ಎಂ. ನಾಟೀಕಾರ ಪ್ರಾಸ್ತವಿಕವಾಗಿ ಮಾತನಾಡಿ ಸ್ವಾಗತಿಸಿ, ನಿರೂಪಿಸಿದರು. ಡಾ.ಅನಂತ ಪದ್ಮನಾಭ ವಂದಿಸಿದರು.

# ಸರೂರ ಗುಡ್ಡ ಉಳಿಸಿ ಅಭಿಯಾನ :ಗ್ರಾಮಸ್ಥರ ಸಭೆ

**ಉದಯರಶ್ಮಿ ನ್ಯೂಸ್**



ಮುದ್ದೇಬಿಹಾಳ: ಅರಣ್ಯ ಇಲಾಖೆಯ ಗಿಡಗಳನ್ನು ನೆಡುವ ಕೆಲಸಕ್ಕೆ ಅಡ್ಡಿ ಪಡಿಸುವವರೇ ಹೆಚ್ಚು. ನಮ್ಮ ಹೊಲದ ಬಾಜೂ ಗಿಡ ಹಚ್ಚಬ್ಯಾಡ್ರಿ, ಕಿತ್ತಿ ಒಗಿತಿವಿ ನೋಡ್ರಿ ಅನ್ನೋರು ಜಾಸ್ತಿ ಇರುವಾಗ, ಬನ್ನಿ, ನಮ್ಮ ಕಡೆ ಗಿಡಗಳನ್ನು ಹಚ್ರಿ ಎನ್ನುವವರನ್ನು ಕಂಡರೆ ನಮಗೆ ಬಹಳ ಸಂತೋಷವಾಗುತ್ತದೆ ಎಂದು ತಾಲ್ಲೂಕು ಸಾಮಾಜಿಕ ವಲಯ ಅರಣ್ಯಾಧಿಕಾರಿ ಎಸ್.ಜಿ.ಸಂಗಾಲಕ ಹೇಳಿದರು.

ತಾಲೂಕಿನ ಸರೂರ ಗ್ರಾಮದ ರೇವಣಸಿದ್ದೇಶ್ವರ ಹಿರೇಗುಡ್ಡದಲ್ಲಿ ಅರಣ್ಯ ಇಲಾಖೆ, ಹಸಿರು ತೋರಣ ಗೆಳೆಯರ ಬಳಗ ಹಾಗೂ ಸರೂರ ಗ್ರಾಮಸ್ಥರು ಹಮ್ಮಿಕೊಂಡ ಸರೂರ ಗುಡ್ಡ ಉಳಿಸಿ ಅಭಿಯಾನದಂಗವಾಗಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಅರಣ್ಯ ಇಲಾಖೆ ಈ ವರ್ಷ ಮಾಡಬೇಕಾದ ಯೋಜನೆಗಳನ್ನು ಹಿಂದಿನ ವರ್ಷವೇ ಮಾಡಿರುತ್ತದೆ. ಆದಾಗ್ಯೂ ಸ್ಥಳ ಬದಲಾವಣೆ ಮಾಡಿ ಯೋಜನೆ ಅನುಷ್ಠಾನ ಮಾಡಲು ಯತ್ನಿಸುತ್ತೇವೆ. ನಮ್ಮೆಲ್ಲರ ಉದ್ದೇಶ ಗಿಡಗಳನ್ನು ನೆಡುವುದಾಗಿದೆ. ಜನರ ಸಹಕಾರ, ಬೆಂಬಲ ದೊರೆತರೆ ಅದು ಯಶಸ್ಸು ಕಾಣುತ್ತದೆ ಎಂದರು.

ಸಾಹಿತಿ ಸಿದ್ದನಗೌಡ ಬಿಜ್ಜೂರ ಮಾತನಾಡಿ, ಸರೂರ ಗ್ರಾಮವು ರೇವಣಸಿದ್ದೇಶ್ವರರ ಮೂಲಪೀಠವಾಗಿ ನಾಡಿಗೇ ಚಿರಪರಿಚಿತ. ಒಂದು ಕಾಲದಲ್ಲಿ ಸಾವಿರಾರು ಗಿಡಗಳಿಂದ ಸಮೃದ್ಧವಾಗಿದ್ದ ಹಿರೇಗುಡ್ಡ ಈಗ ಬೋಳು ಬೋಳಾಗಿ ಕಾಣುತ್ತಿರುವುದು ನೋವು ತರಿಸುತ್ತದೆ. ಸರೂರ ಗುಡ್ಡ ತನ್ನ ಗತಕಾಲದ ವೈಭವವನ್ನು ಮರಳಿ ಪಡೆಯಲು ಹಸಿರು ತೋರಣ ಗೆಳೆಯರ ಬಳಗ ಮತ್ತು ಅರಣ್ಯ ಇಲಾಖೆ ಜೊತೆಯಲ್ಲಿ ಬಂದು ಕೆಲಸ ಮಾಡುತ್ತಿರುವುದು ಸಂತಸ ತಂದಿದೆ ಎಂದರು.

ಹಸಿರು ತೋರಣ ಗೆಳೆಯರ ಬಳಗದ ಸಂಚಾಲಕ ಮಹಾಬಲೇಶ್ವರ ಗಡೇದ ಮಾತನಾಡಿ, ಯಾವುದೇ ಯೋಜನೆಯ ಆರಂಭದಲ್ಲಿ ವಿಘ್ನಗಳು, ಸ್ಥಳೀಯ ವಿರೋಧ, ಅಪಸ್ವರ ಸಾಮಾನ್ಯ. ಅದನ್ನು ಮೀರಿ ಪರಿಸರ ಉಳಿಸಬೇಕು ಎನ್ನುವ ಸಮಾನ ಮನಸ್ಸಿನ ಜನರು ಸೇರಿ ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ಕೆಲವೇ ವರ್ಷಗಳಲ್ಲಿ ಸರೂರ ಗುಡ್ಡದಲ್ಲಿ ಹೆಚ್ಚಿನ ಹಸಿರು ಕಾಣಬಹುದು ಎಂದರು.

ಸಿದ್ದು ತೊಂಡಿಹಾಳ, ಬಸನಗೌಡ ಪಾಟೀಲ, ತಬಸಯ್ಯ ಗುರವಿನ, ಸಿದ್ದಯ್ಯ ಗುರವಿನ, ಸಿದ್ದಯ್ಯ ಗುರವಿನ, ಶಿವಯ್ಯ ಗುರವಿನ ಮಾತನಾಡಿ, ಸರೂರ ಗುಡ್ಡ ಉಳಿಸುವ ಅಭಿಯಾನದಲ್ಲಿ ಎಲ್ಲ ರೀತಿಯ ನೆರವು, ಸಹಕಾರ ನೀಡುವುದಾಗಿ ತಿಳಿಸಿದರು. ಸಭೆಯಲ್ಲಿ ಮಹಾಂತೇಶ ಬೋರಗಿ, ಸಿದ್ರಾಮ ವಾಲಿಕಾರ, ಸುಭಾಷ್ ಬಡಿಗೇರ, ಶಿವು ಬೋರಗಿ, ಸಂತೋಷ ಜಾಧವ, ದೇವಲಪ್ಪ ನಾಯಕ್, ಶಿವಾನಂದ ನಾಯಕ, ಹಸಿರು ತೋರಣ ಬಳಗದ ಅಧ್ಯಕ್ಷ ಡಾ.ವೀರೇಶ ಇಟಗಿ, ಉಪಾಧ್ಯಕ್ಷ ಬಸವರಾಜ ಬಿಜ್ಜೂರ, ಮಾಜಿ ಅಧ್ಯಕ್ಷರಾದ ನಾಗಭೂಷಣ ನಾವದಗಿ, ಬಿ.ಎಸ್.ಮೇಟಿ, ಅಶೋಕ ರೇವಡಿ, ರಾಜಶೇಖರ ಕಲ್ಯಾಣಮಠ, ರವಿ ತಡಸದ, ಜಿ.ಎಂ.ಹುಲಗಣ್ಣಿ, ಶ್ರೀಶೈಲ ಮರೋಳ, ಪುಟ್ಟು ಕಡಕೋಳ, ಅರಣ್ಯ ಇಲಾಖೆಯ ಅಧಿಕಾರಿಗಳಾದ ಅಶೋಕ ಚವ್ಹಾಣ, ಮಲ್ಲಪ್ಪ ತೇಲಿ, ಅನಿಲ ಚವ್ಹಾಣ, ಬಸವರಾಜ ಬ್ಯಾಕೋಡ ಸೇರಿದಂತೆ ಸರೂರ ಗ್ರಾಮಸ್ಥರು ಇದ್ದರು. ಸಭೆಯ ನಂತರ ಸಾಂಕೇತಿಕವಾಗಿ ಗಿಡಗಳನ್ನು ನೆಡಲಾಯಿತು. ವೇ.ಸಿದ್ದಯ್ಯ ಶರಬಯ್ಯ ಗುರವಿನ ಮಂತ್ರ ಪಠಣ ಮಾಡಿದರು.

## ಸ್ವರಾಕ್ಷರ ಕವನ

# ನನ್ನ ಮುರುಡೇಶ

ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

– ಜಯಂತಿ ಎಸ್ ಭಟ್ಟ, ಶಿರಾಲಿ

("ನಮ್ಮ ಕಥಾ ಅರಮನೆ" ಬರಹಗಾರರು)



ಅ – ಅನುರಾಗದ ಚಂದದ ಒಡೆಯನೆ
ಆ – ಆತ್ಮಲಿಂಗ ರೂಪಿ ಮುರ್ಡೇಶ್ವರನೆ
ಇ – ಇನ್ನು ಇನ್ನೂ ನಿನ್ನ ಧ್ಯಾನಿಸುವಂತೆ
ಈ –ಈ ಮನಕೆ ಶಕ್ತಿ ನೀಡಿ ಹರಸು ಶಿವನೆ
ಉ – ಉಮಾಪತಿ ನೀನು ಕಡಲ ನಿವಾಸಿ
ಊ –ಊಹೆಗೂ ನಿಲುಕದು ನಿನ್ನಯ ಶಕ್ತಿ
ಋ – ಋಷಿಮುನಿಗಳಿಗೆ ಆರಾಧಕ ನೀನು
ಎ – ಎಲ್ಲಿಂದ ತರಲಿ ವರ್ಣಿಸೆ ಪದಗಳನು
ಏ – ಏನು ಕೇಳಿದರೂ ಕೊಡುವವನು ನೀನು
ಐ – ಐಸಿರಿ ವೈಭೋಗವ ಎಂದೂ ಬೇಡೆನು
ಒ –ಒಲವಿಂದಲಿ ಕೈಹಿಡಿದು ನಡೆಸೆನ್ನನು
ಓ –ಓಡುವ ಕಾಲದ ಚಕ್ರದಡಿ ಸಿಲುಕದಂತೆ
ಔ –ಔದಾರ್ಯದಿ ನಡೆಸು ಈ ಬಾಳಿನ ಸಂತೆ
ಅಂ –ಅಂತರಂಗದಿ ನೀನಿರಲು ಇಲ್ಲ ಭಯವು
ಅಃ– ಆಹ! ಪಸರಿಸಲಿ ಎಲ್ಲೆಲ್ಲೂ ನಿನ್ನೊಲವು



# 1 ನೇ ಪುಟದಿಂದ: ನೂತನ ಹೈಟೆಕ್ ಗ್ರಂಥಾಲಯ ಪ್ರಾರಂಭ ಸ್ವಾಗತಾರ್ಹ :ದವಿಪ

ಆಸನಗಳಿಲ್ಲದೆ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಅದನ್ನು ಗಮನಿಸಿದ ದಲಿತ ವಿದ್ಯಾರ್ಥಿ ಪರಿಷತ್ ಈ ಕುರಿತು ಜಿಲ್ಲಾಧಿಕಾರಿಗಳಿಗೆ ಸಂಪರ್ಕಿಸಿ ಮನವಿ ಮಾಡಿತು.

ನಂತರ ಮನವಿ ಪ್ರತಿಫಲವಾಗಿ ವಿದ್ಯಾರ್ಥಿಗಳಿಗೆ ಅನುಕೂಲ ಆಗುವ ನಿಟ್ಟಿನಲ್ಲಿ ಗ್ರಂಥಾಲಯ ಸಮಯವನ್ನು ಬದಲಾವಣೆ ಮಾಡಿದರು. ಮೊದಲು ಬೆಳಿಗ್ಗೆ 3 ತಾಸು ಸಂಜೆ 3 ತಾಸು ಇದ್ದ ಸಮಯವನ್ನ ಹಗಲು ಪೂರ್ತಿ ಆಯಿತು. ಪ್ರಸ್ತುತ ದಿನಮಾನಗಳಿಗೆ ಬೇಕಾದ ಪುಸ್ತಕಗಳನ್ನ ಪಟ್ಟಿ ಮಾಡಿ ಅವುಗಳನ್ನು ತರಿಸಲು ಆಗ್ರಹಿಸಲಾಗಿತ್ತು. ನೂತನ ಕಟ್ಟಡ ನಿರ್ಮಾಣ ಮಾಡಲು ಹೋರಾಟವನ್ನ ರೂಪಿಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿತ್ತು. ಕೆಲವು ತಿಂಗಳ ನಂತರ ನೂತನ ಕಟ್ಟಡಕ್ಕೆ ಹಣ ಮಂಜೂರಾಯಿತು. ಗ್ರಂಥಾಲಯದ ಕಟ್ಟಡ ಪ್ರಾರಂಭವಾಗಿ ಕಾಮಗಾರಿ ಅರ್ಧಕ್ಕೆ ನಿಂತಿರುವಾಗಲು ಜಿಲ್ಲಾಧಿಕಾರಿಗಳಿಗೆ ಮತ್ತೆ ಮನವಿ ಮಾಡಿ ಕಾಮಗಾರಿ ಪ್ರಾರಂಭಿಸಲು ಒತ್ತಡ ಹಾಕಲಾಯಿತು. ಕಾಮಗಾರಿ ಮುಗಿದು ಆರು ತಿಂಗಳಾದರೂ ವಿವಿಧ ಕಾರಣಗಳು ನೀಡಿ ಗ್ರಂಥಾಲಯ ಪ್ರಾರಂಭಿಸಲು ಮುಂದೆ ಹಾಕುತ್ತಾ ಬಂದ ಜಿಲ್ಲಾಡಳಿತ ಕ್ರಮ ಖಂಡಿಸಿ ಮತ್ತೆ ಜಿಲ್ಲಾಧಿಕಾರಿಗಳಿಗೆ ಭೇಟಿ ಮಾಡಿ, ಗ್ರಂಥಾಲಯ ಲೋಕಾರ್ಪಣೆ ಮಾಡಲು ವಿಳಂಬ ನೀತಿ ಅನುಸರಿಸಿದರೆ ಭವಿಷ್ಯದಲ್ಲಿ ಉಗ್ರವಾದ ಹೋರಾಟ ಮಾಡಲಾಗುಹುದು ಸಂಬಂಧ ಪಟ್ಟ ಅಧಿಕಾರಿಗಳಿಗೆ ಹೇಳಲಾಗಿತ್ತು. ಈ ಒತ್ತಡ ಮತ್ತು ಹೋರಾಟದ ಫಲವಾಗಿ ಇವತ್ತು ನೂತನ ಗ್ರಂಥಾಲಯವನ್ನು ಪ್ರಾರಂಭಿಸಲು ಜಿಲ್ಲಾಡಳಿತ ಮೂಲಕ ಸೂಚನೆ ದೊರೆತಿದೆ.

ಇದು ದಲಿತ ವಿದ್ಯಾರ್ಥಿ ಪರಿಷತ್‌ನ ಹೋರಾಟದ ಫಲವಾಗಿ ನೂರಾರು ವಿದ್ಯಾರ್ಥಿಗಳಿಗೆ ಮತ್ತು ನಗರದ ನಾಗರಿಕರಿಗೆ ಅಲ್ಲದೇ ವಿವಿಧ ಸ್ಪರ್ಧಾತ್ಮಕ ಪರೀಕ್ಷೆ ತಯಾರಿ ಮಾಡುವ ಯುವಜನರಿಗೆ ಅನುಕೂಲವಾಗಲಿದೆ ಎಂದು ಅಕ್ಷಯ್ ಕುಮಾರ್ ತಿಳಿಸಿದರು

ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುತ್ತಿರುವ ಸ್ಪರ್ಧಾರ್ಥಿಗಳಿಗೆ ಅದರಲ್ಲೂ ಹೈಟೆಕ್ ಗ್ರಂಥಾಲಯ ತುಂಬಾ ಉಪಯೋಗವಾಗಲಿದೆ. ಗ್ರಂಥಾಲಯವನ್ನು ಜಿಲ್ಲಾಡಳಿತ ಒಳ್ಳೆಯ ರೀತಿಯಲ್ಲಿ ನಿರ್ವಹಣೆ ಮಾಡಲಿ ಎಂದು ಎಂದು ದಲಿತ ವಿದ್ಯಾರ್ಥಿ ಪರಿಷತ್ ಕೋರುತ್ತದೆ. ಇದಕ್ಕೆ ಸಹಕರಿಸಿದ ಅಧಿಕಾರಿಗಳಿಗೆ ಮತ್ತು ಹೋರಾಟದ ಮುಖಂಡರಿಗೆ ಪರಿಷತ್ ಅಭಿನಂದನೆ ತಿಳಿಸುತ್ತದೆ ಎಂದರು.

# ಶಾಲಾ ಸುಧಾರಣಾ ಸಮಿತಿ ಪದಾಧಿಕಾರಿಗಳಿಗೆ ಸನ್ಮಾನ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪಟ್ಟಣದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ 2024–25 ಸಾಲಿಗೆ ಶಾಲಾ ಸುಧಾರಣಾ ಸಮಿತಿಯ ಉಪಾಧ್ಯಕ್ಷರಾಗಿ ನೇಮಕಗೊಂಡ ಬಸವರಾಜ ಶೆಂಡೆ, ಮಹಿಳಾ ಸದಸ್ಯೆಯಾಗಿ ನೇಮಕಗೊಂಡ ದೀಪಾ ನಾಯ್ಕೋಡಿ ಅವರನ್ನು ಮಂಗಳವಾರ ಸಂಜೆ ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಶ್ರೀಮಠದಲ್ಲಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು, ಶ್ರೀಮಠದ ಶಿಷ್ಯ ಬಳಗದಲ್ಲಿರುವ ಇಬ್ಬರನ್ನು ಕಾಲೇಜಿನ ಸುಧಾರಣಾ ಸಮಿತಿಗೆ ನೇಮಕ ಮಾಡಿರುವದು ಸಂತಸದಾಯಕ ಸಂಗತಿ. ನೂತನ ಸಮಿತಿ ಸದಸ್ಯರು ಕಾಲೇಜಿನ ಸಮಸ್ಯೆಗಳಿಗೆ ಪರಿಹಾರ ಒದಗಿಸುವಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವ ಮೂಲಕ ಕಾಲೇಜಿನಲ್ಲಿ ಗುಣಮಟ್ಟದ ಶೈಕ್ಷಣಿಕ ಚಟುವಟಿಕೆಗಳು ನಡೆಯುವಂತೆ ಶ್ರಮಿಸಬೇಕೆಂದರು.

ಈ ಸಂದರ್ಭದಲ್ಲಿ ಸಂಗಪ್ಪ ಡಂಬಳ, ಬಸವರಾಜ ಗಚ್ಚಿನವರ, ಬಸವರಾಜ ಕಿಣಗಿ, ಲಕ್ಷ್ಮೀ ನಾಯ್ಕೋಡಿ, ಚಂದ್ರಶೇಖರ ಗೊಳಸಂಗಿ, ಗಿರಿಮಲ್ಲಪ್ಪ ಮೇಟಿ, ವಿರೇಶ ಹಿರೇಮಠ ಇತರರು ಇದ್ದರು.

# ಯುವಜನತೆ ಮಾದಕ ವಸ್ತುಗಳಿಂದ ದೂರವಿರಿ: ಪಿಎಸೈ ದುಂಡಸಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ಮಾದಕ ದ್ರವ್ಯ ಸೇವನೆ ನಮ್ಮ ದೇಶದ ಅತೀ ದೊಡ್ಡ ಪಿಡುಗು. ಈ ಪಿಡುಗನ್ನು ತಳ ಮಟ್ಟದಿಂದ ತೊಡೆದು ಹಾಕುವ ಪ್ರಯತ್ನ ನಡೆಯಬೇಕು. ಇತ್ತೀಚಿನ ದಿನಗಳಲ್ಲಿ ಗಾಂಜಾ ಸೇವನೆಗೆ ಯುವ ಜನತೆ ಬಲಿಯಾಗುತ್ತಿದ್ದು, ಯುವಕರ ಜೀವನವೇ ಶೂನ್ಯವಾಗುತ್ತಿದೆ. ಶಾಲಾ–ಕಾಲೇಜುಗಳ ಸುತ್ತಲೂ ಗಾಂಜಾ ಸೇರಿದಂತೆ ಮಾದಕ ವ್ಯಸನ ಸೇವನೆ ಹೆಚ್ಚಾಗುತ್ತಿದ್ದು, ಯುವ ಜನರು ಇದನ್ನು ಸೇವನೆಯನ್ನು ಬಹಿಷ್ಕರಿಸಬೇಕು ಎಂದು ವಿಜಯಪುರ ಆದರ್ಶ ನಗರ ಪೊಲೀಸ್ ಠಾಣೆಯ ಪಿಎಸ್‌ಐ ಐ.ಎಂ.ದುಂಡಸಿಯ ಹೇಳಿದರು.

ಬುಧವಾರದಂದು ಜಿಲ್ಲಾ ಬಂಜಾರಾ ವಿದ್ಯಾವರ್ಧಕ ಸಂಘದ ಬಂಜಾರಾ ಪ್ರಾಥಮಿಕ ಮತ್ತು ಪ್ರೌಢ ಶಾಲೆ ಹಾಗೂ ಆದರ್ಶ ನಗರ ಪೊಲೀಸ್ ಠಾಣೆಯ ಸಂಯುಕ್ತಾಶ್ರಯದಲ್ಲಿ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ 'ಮಾದಕ ವಸ್ತುಗಳ ಸಾಗಾಣಿಕೆ ಹಾಗೂ ಮಾರಾಟದ ಕುರಿತು ಜಾಗೃತಿ' ಕಾರ್ಯಕ್ರಮವನ್ನು ಉದ್ಧೇಶಿಸಿ ಮಾತನಾಡಿದ ಅವರು. ಮದ್ಯಪಾನ ವ್ಯವಸ್ಥೆ ಇಡೀ ಸಮಾಜವನ್ನೇ ಹಾಳು ಮಾಡುತ್ತಿದೆ. ಮದ್ಯಪಾನ, ಮಾದಕ ದ್ರವ್ಯ ಸೇವನೆ ಮುಂತಾದವುಗಳು ನಮ್ಮ ಸಮಾಜದ ಕೆಟ್ಟ ವ್ಯವಸ್ಥೆಯಾಗಿದೆ. ಯುವಜನರು ಇಂತಹ ದುಃಶ್ಚಟಗಳಿಗೆ ಬಲಿಯಾಗದಂತೆ ಎಚ್ಚರ ವಹಿಸಿ. ಮಕ್ಕಳು ಮಾದಕ ದ್ರವ್ಯ ಸೇವನೆಯಿಂದ ದೂರವಿರುವಂತೆ ಕಾಳಜಿ ವಹಿಸಿ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್.ವ್ಹಿ.ದೇಶಪಾಂಡೆಯವರು ಮಾತನಾಡುತ್ತ. ಮಾದಕ ವ್ಯಸನ ಕೇವಲ ವ್ಯಕ್ತಿಯನ್ನಷ್ಟೇ ಹಾಳು ಮಾಡುವುದಿಲ್ಲ. ಕುಟುಂಬ ಹಾಗೂ ಸಮಾಜದ ಸ್ವಾಸ್ಥ ▯▯ವನ್ನು ಹಾಳು ಮಾಡುತ್ತದೆ. ಮಾದಕ ವಸ್ತುಗಳ ಸೇವನೆಗೊಮ್ಮೆ ಒಳಗಾದರೆ, ಅದರಿಂದ ಹೊರಬರುವುದು ಕಷ್ಟ. ಇದು ಮಾನವನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಶಿಕ್ಷಕ ಸಿಬ್ಬಂದಿ ವರ್ಗ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮದ ಸ್ವಾಗತ ಆರ್.ವಿ.ಭುಜಂಗನವರ, ನಿರೂಪಣೆ ಮತ್ತು ವಂದನಾರ್ಪಣೆಯನ್ನು ಎಸ್.ಕೆ.ಶಿಂಧೆಯವರು ನಡೆಸಿಕೊಟ್ಟರು.

# ವಿಶ್ವಾಸ ದ್ರೋಹಿ

## ಭಾವರಶ್ಮಿ

– ಛಾಯಾ ಪದ್ಮನಾಭ್

("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ



ಇಂದು ಮಾನವ ಮತ್ತು ಸಮಾಜ ಎರಡು ವಿಚ್ಛನ್ನತೆಯ ತುಕುಡುಗಳಾಗಿ ಭೂಮಿಯ ಮೇಲೆ ಬದುಕುತ್ತಿವೆ .ಇಂತಹ ಜಾಗತಿಕ ಕ್ರೀಯಾಲೋಕದ ಒಂದು ತುದಿಯಲ್ಲಿ ಮಾನವ. ಇನ್ನೊಂದು ತುದಿಯಲ್ಲಿ ಸಮಾಜ. ಈ ಎರಡೂ ತುದಿಗಳ ಅಂತರಗಳೊಳಗೆ ಅನೇಕ ಮಾನವ ಕುಟುಂಬಗಳಲ್ಲಿ ಹಗೆತನ, ದ್ವೇಷ, ಅಸೂಯೆಗಳು ಹುಟ್ಟಿಕೊಂಡು ತಮ್ಮೊಳಗೆ ಇರಬೇಕಾದ ಮಾನವೀಯತೆಯನ್ನು, ಅಂದರೆ ದಯೆ, ಕರುಣೆ, ಅನುಕಂಪ, ಕರುಣೆ, ಪ್ರೀತಿ..!. ಎಲ್ಲವನ್ನೂ ಕಳೆದುಕೊಂಡಿದ್ದಾರೆ. ಮನುಷ್ಯ "ಎಲ್ಲಿ ಅಭಿಮಾನ ಮಾಡಬೇಕು", " ಯಾರಲ್ಲಿ ಅನುರಕ್ತನಾಗಬೇಕು" ಎನ್ನುವ ವಿಷಯದಲ್ಲಿ ಎಡವುತ್ತಿದ್ದಾನೆ. ಇವತ್ತಿನ ಮನುಷ್ಯನ ಮನಸ್ಸು ಸ್ಪಷ್ಟ ಕನ್ನಡಿಯಾಗಿಲ್ಲ. ಆತನ ನಿಲುವುಗಳಲ್ಲಿ ನಿಖರತೆ ಇಲ್ಲ. ಎಲ್ಲವನ್ನೂ ನುಂಗಿಬಿಡುವ ದಾಹ.

ಬದಲಾಗುತ್ತಿರುವ ಬದುಕಿನಲ್ಲಿ ಮಾನವೀಯ ಮೌಲ್ಯಗಳು ಮರೆಯಾಗುತ್ತಿವೆ. ಸ್ವಾರ್ಥ ಬದುಕಿನಲ್ಲಿ ಎಲ್ಲಾ ಬಂಧಗಳೂ ಆಡಂಬರವಾಗಿವೆ. ಹಿರಿಯರಲ್ಲಿ ಆದರವಿಲ್ಲದೇ ಮುದುರಿಹೋಗುತ್ತಿದೆ ಮನ. ಧನ ಗಳಿಸುವ ದಾಹದಲ್ಲಿ ಜೀವನದ ಶಿಸ್ತು ಕುಸಿಯುತ್ತಿದೆ. ನಿತ್ಯವೂ ತಲೆಯೆತ್ತುತ್ತಿರುವ ನೂರಾರು ವೃದ್ಧಾಶ್ರಮಗಳು ಸಮಾಜದ ಬಹು ದೊಡ್ಡ ಬೆಳವಣಿಗೆ ಎಂಬ ಭ್ರಮೆಯಲ್ಲಿದೆ ಜನ. ಗುರು ಹಿರಿಯರ ಅನುಗ್ರಹವು ದೇವರ ಅನುಗ್ರಹಕ್ಕೆ ಬೇರು ಇದ್ದಂತೆ. ಆದರೂ ಅದು ಬೋರಾಗಿದೆ. ನೈತಿಕ ನೆಲೆಗಳು ಜಾರಿ ಹೋಗಿವೆ. ಸ್ವಾರ್ಥದ ಬದುಕಿನಲ್ಲಿ ಅದೆಂತಹ ಅಸೂಯೆ ಗೂಡುಕಟ್ಟಿದೆ.

ತನಗಾಗದ ಏಳಿಗೆ ಯಾರಿಗೂ ಆಗಬಾರದದೆಂಬ ಭಾವನೆ ಭುಗಿಲೆದ್ದಿದೆ. ಸಂತಸದೊಡೆತನ ಕಡೆತನವೂ ನನ್ನೊಬ್ಬನಲ್ಲೇ ಇರಬೇಕೆಂಬ ಹಂಬಲ ಅಚಲವಾಗಿ ಬೀಡುಬಿಟ್ಟಿದೆ.

ಅನೇಕ ಪ್ರಸಂಗಗಳು ನಮ್ಮ ಒಳ ಬಂಧಗಳನ್ನು ಹರಿದು ಮುಕ್ಕಿಬಿಡುತ್ತಿವೆ. ಹುಟ್ಟಿಗೂ ಮೊದಲು ಹುಟ್ಟಿಕೊಂಡ ಬಂಧುಗಳು ಕೆಟ್ಟು ಹೋಗುತ್ತಿವೆ. ಸುಟ್ಟು ಹೋಗುತ್ತಿವೆ. ಕೊನೆ ಇಲ್ಲದ ಲೋಭ, ಮನಕ್ಕಿಂತಲೂ ಧನಕ್ಕೆ ನೀಡಿದ ಮೌಲ್ಯ ಇವು ಬದುಕಿನ ನಿಜ ಭಾವನೆಗಳನ್ನು ಕೆಡಿಸಿಬಿಡುತ್ತಿವೆ. ದಿನ ಬೆಳಗಾದರೆ ಧನಕ್ಕಾಗಿ, ಆಸ್ತಿಗಾಗಿ ದೂರವಾಗುವ ತಂದೆ ಮಕ್ಕಳು, ಅಣ್ಣ ತಮ್ಮಂದಿರು, ಗಂಡ ಹೆಂಡತಿಯರ ಸುದ್ದಿಗಳು ನಮ್ಮ ಕಿವಿಗೆ ಬೀಳುತ್ತಲೇ ಇರುತ್ತವೆ. ಇದಕ್ಕೆ ಪೂರಕವಾದ ಒಂದು ಕಾಲ್ಪನಿಕ ಕಥೆ ಇಲ್ಲಿ ಹೇಳುವೆ.





ಅವರಿಬ್ಬರೂ ಅಣ್ಣ ತಮ್ಮದಿಂರು. ತಂದೆ ಇರುವ ತನಕ ಇಬ್ಬರೂ ಅನ್ಯೋನ್ಯತೆ, ಪ್ರೀತಿ, ವಿಶ್ವಾಸದಲ್ಲಿ ಅವರಿಗೆ ಅವರೇ ಸಾಟಿ ಎನ್ನುವಂತಿದ್ದರು. ಇಬ್ಬರೂ ಸೇರಿ ವ್ಯವಸಾಯ ಮಾಡುತ್ತಿದ್ದರು. ತಂದೆ ಕಾಯಿಲೆಯಿಂದ ಕೊನೆ ಉಸಿರೆಳೆದ. ಅಣ್ಣ ತನ್ನ ತಮ್ಮನನ್ನು ಪ್ರೀತಿಯಿಂದಲೇ ನೋಡಿಕೊಳ್ಳುತ್ತಿದ್ದ. ಒಮ್ಮೆ ಬೆಳೆದ ಬೆಳೆಯನ್ನು ಮಾರಲೆಂದು ಬುತ್ತಿ ಕಟ್ಟಿಕೊಂಡು ನೆರೆಯ ನಗರಕ್ಕೆ ಹೊರಟರು. ನೆರೆಯ ನಗರಿಯ ತಲುಪಲು ಅವರು ಕಾಡಿನ ಒಡಲ ದಾಟಬೇಕಿತ್ತು. ರಕ್ಷಣೆಗಾಗಿ ಒಂದು ಪಿಸ್ತೂಲನ್ನೂ ಜೊತೆಗೊಯ್ದರು. ಇಬ್ಬರೂ ಎತ್ತಿನ ಬಂಡಿಯಲ್ಲಿ ಪ್ರಯಾಣಿಸುತ್ತಿದ್ದರು. ಹೀಗೇ ದಾರಿ ಸವೆಸುತ್ತಿರುವಾಗ ಹಸಿವೆಯಾಯಿತು. ಅಲ್ಲೊಂದು ಬಾವಿ ಕಾಣಿಸಿತು. ನೀರು ಸೇದುವ ಹಗ್ಗ, ಕೊಡವೂ ಅಲ್ಲಿತ್ತು. ಊಟ ಮಾಡಿ ಮುಂದೆ ಪ್ರಯಾಣ ಬೆಳೆಸೋಣ ಅಂದ ಅಣ್ಣ. ಸರಿ ಎಂದ ತಮ್ಮ ಕುಡಿಯಲು ನೀರು ಸೇದಿಕೊಂಡು ಬರಲು ಬಾವಿಯ ಬಳಿ ಹೋದ. ಅದು ಖಾಲಿ ಕೊಡವಾಗಿರದೇ ಬೆಳ್ಳಿ, ಬಂಗಾರದ ನಾಣ್ಯಗಳಿಂದ ಆ ಕೊಡ ತುಂಬಿದ್ದನ್ನು ಕಂಡ. ನಾವು ಜೀವನವಿಡೀ ದುಡಿದರೂ, ವ್ಯಾಪಾರ ಮಾಡಿದರೂ ಘಳಿಸಲಾಗದ್ದು ಇದರಲ್ಲಿ ಇದೆ. ಸುಖದಿಂದ ಜೀವನ ನಡೆಸಬಹುದೆಂದು ಮೋಹದ ಬಲೆಗೆ ಬಿದ್ದ. ಅಣ್ಣನಿಗೆ ಹೇಳಿದರೆ ಈ ಸಂಪತ್ತು ಪರರದ್ದು. ನಮಗೆ ಬೇಡ ಅನ್ನುತ್ತಾನೆ. ಅದಕ್ಕಾಗಿ ಅವನನ್ನೇ ಕೊಂದುಬಿಟ್ಟರೇ.... ಎಂಬ ದುರಾಲೋಚನೆ ಬಂದಿತು ಆ ತಮ್ಮನ ಮನದಲ್ಲಿ. ಅಣ್ಣನನ್ನು ಕೊಂದರೆ ಈ ಸಂಪತ್ತಿನ ಜೊತೆಗೆ ಎಲ್ಲಾ ಆಸ್ತಿಗೂ ನಾನೇ ವಾರಸುದಾರನಾಗುವೆ. ಇಲ್ಲದಿದ್ದರೆ ಅಣ್ಣನ ಆಧೀನದಲ್ಲಿಯೇ ಈ ಆಸ್ತಿಯನ್ನು ಅನುಭವಿಸಬೇಕು ಎಂದು ಯೋಚಿಸಿದ. ಯೋಚನೆ ಕಾರ್ಯಗತವಾಯಿತು. ಮರದಡಿಯಲ್ಲಿ ಮರೆಯಾಗಿ ನಿಂತು ಪಿಸ್ತೂಲಿನಿಂದ ಅಣ್ಣನನ್ನು ಗುರಿಯಿಟ್ಟು ಕೊಂದೇ ಬಿಟ್ಟ ತಮ್ಮ. ಧನಪಿಶಾಚಿ ಅಣ್ಣನನ್ನು ನುಂಗಿಬಿಟ್ಟಿತು. ಆತ್ಮೀಯತೆ, ಪರಸ್ಪರ ಪ್ರೀತಿಯಿಂದ ಇದ್ದ ಅಣ್ಣ ಕ್ಷಣಾರ್ಧದಲ್ಲಿ ಹೆಣವಾದ.

ಇಂದು ಇಂತಹ ದುರಂತಗಳು ನಮ್ಮ ಕಣ್ಣ ಮುಂದೆ ನಿತ್ಯವೂ ನಡೆಯುತ್ತವೆ. ಧನಕ್ಕಾಗಿ, ಆಸ್ತಿಗಾಗಿ ಜನ ಏನೂ ಮಾಡಲೂ ಸಿದ್ಧ. ಎಂಥವರನ್ನೂ ಕೊಂದು ಬಿಡಬಲ್ಲರು. ಆದರೆ ಇದರಿಂದ ಯಾವ ಸುಖವಿದೆ? ಮನ ಮಿಡಿಯಬೇಕು. ಪ್ರೀತಿ, ಮಮತೆ, ಸಂಬಂಧಗಳಿಗೆ ಬೆಲೆ ಕೊಡಬೇಕು. ಧನ, ಸಂಪತ್ತು, ಆಸ್ತಿಗಿಂತ ಮನುಷ್ಯ ಧರ್ಮವನ್ನು ನಂಬಿದರೆ ಬದುಕು ಬಂಗಾರವಾಗುವದರಲ್ಲಿ ಸಂದೇಹವಿಲ್ಲ. ಆಗಲೇ ನಮ್ಮ ಬದುಕಿಗೊಂದು ನೆಲೆ ಬರುವದು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR